ಸಂಪುಟ 01 । ಸಂಚಿಕೆ 182 ಭಾನುವಾರ 06 ಸೆಪ್ಟೆಂಬರ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1. National Read a Book Day ಪುಸ್ತಕ ಓದುವ ಅಭ್ಯಾಸವನ್ನು ಉತ್ತೇಜಿಸುವ ದಿನ.

2. World Shorebirds Day ಕರಾವಳಿ ಪಕ್ಷಿಗಳ ಸಂರಕ್ಷಣೆ ಮತ್ತು ಅವುಗಳ ಬಗ್ಗೆ ಜಾಗೃತಿ ಮೂಡಿಸುವ ದಿನ.

3. Fight Procrastination Day ಕೆಲಸಗಳನ್ನು ಮುಂದೂಡುವ ಅಭ್ಯಾಸವನ್ನು ಕಡಿಮೆ ಮಾಡಿ ಸಮಯವನ್ನು ಸದುಪಯೋಗಪಡಿಸಿಕೊಳ್ಳಲು ಪ್ರೇರೇಪಿಸುವ ದಿನ.

## ಸುಭಾಷಿತ

ಒಬ್ಬ ವ್ಯಕ್ತಿಯ ಪ್ರತಿಭೆಯನ್ನು ಯಾರಿಂದಲೂ ಬಚ್ಚಿಡಲು ಸಾಧ್ಯವಿಲ್ಲ.

–ಸ್ವಾಮಿ ವಿವೇಕಾನಂದ

### ಸನ್ ರೈಸ್ ಕಾಲೇಜಿನ ಶನಿವಾರದ ವಿಶೇಷ ಉಪನ್ಯಾಸ ನೀಡಿದ ಡಾ. ಅಮ್ಜದ್ ಶರೀಫ್

# ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಮಹಾಶಕ್ತಿ ಶಿಕ್ಷಕರು– ಡಾ.ಅಮ್ಜದ್ ಶರೀಫ್

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು:** ವಿದ್ಯಾರ್ಥಿಗಳಲ್ಲಿ ಶೈಕ್ಷಣಿಕ ಜ್ಞಾನ ಮಾತ್ರವಲ್ಲದೆ, ವಿವಿಧ ವೈದ್ಯಕೀಯ ಕ್ಷೇತ್ರಗಳ ಕುರಿತು ಅರಿವು, ಆತ್ಮವಿಶ್ವಾಸ ಹಾಗೂ ವೃತ್ತಿಪರ ಕೌಶಲ್ಯವನ್ನು ಬೆಳೆಸುವ ಉದ್ದೇಶದಿಂದ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ವತಿಯಿಂದ ಪ್ರತೀ ಶನಿವಾರ ಆಯೋಜಿಸಲಾಗುತ್ತಿರುವ ವಿಶೇಷ ಉಪನ್ಯಾಸ ಕಾರ್ಯಕ್ರಮದ ಅಂಗವಾಗಿ ಇಂದು “ಯುನಾನಿ ಪದ್ಧತಿಯ ಮಹತ್ವ” ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮಕ್ಕೆ ಸಿಂಧನೂರಿನ ಸರ್ಕಾರಿ ಯುನಾನಿ ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಹಾಗೂ ಖ್ಯಾತ ಯುನಾನಿ ತಜ್ಞರಾದ ಡಾ. ಅಮ್ಜದ್ ಶರೀಫ್ ಅವರು ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ನೀಡಿದರು.ಯುನಾನಿ ವೈದ್ಯ ಪದ್ಧತಿಯ ಇತಿಹಾಸ, ಅದರ ವೈಶಿಷ್ಟ್ಯಗಳು, ಚಿಕಿತ್ಸಾ ವಿಧಾನಗಳು ಹಾಗೂ ಇಂದಿನ ಆರೋಗ್ಯ ಕ್ಷೇತ್ರದಲ್ಲಿ ಯುನಾನಿ ಪದ್ಧತಿಯ ಮಹತ್ವದ ಕುರಿತು ಅವರು ವಿದ್ಯಾರ್ಥಿಗಳಿಗೆ ವಿವರವಾಗಿ ತಿಳಿಸಿದರು. ವಿವಿಧ ವೈದ್ಯಕೀಯ ಪದ್ಧತಿಗಳ ಕುರಿತು ಮೂಲಭೂತ ಜ್ಞಾನ ಹೊಂದಿರುವುದು ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವ ನರ್ಸಿಂಗ್ ವಿದ್ಯಾರ್ಥಿಗಳಿಗೆ ಅತ್ಯಂತ ಉಪಯುಕ್ತವಾಗಿದೆ ಎಂದು ಅವರು ತಿಳಿಸಿದರು.ಇದೇ ಸಂದರ್ಭದಲ್ಲಿ ನರ್ಸಿಂಗ್ ವೃತ್ತಿಯ ಮಹತ್ವ ಹಾಗೂ ಆರೋಗ್ಯ ಸೇವೆಯಲ್ಲಿ ನರ್ಸಿಂಗ್ ಸಿಬ್ಬಂದಿಯ ಪಾತ್ರದ ಕುರಿತು ಮಾತನಾಡಿದ ಡಾ. ಅಮ್ಜದ್ ಶರೀಫ್ ಅವರು, ರೋಗಿಗಳ ಆರೈಕೆ, ಮಾನವೀಯತೆ, ಸೇವಾ ಮನೋಭಾವ ಮತ್ತು ಕರ್ತವ್ಯನಿಷ್ಠೆ ನರ್ಸಿಂಗ್ ವೃತ್ತಿಯ ಪ್ರಮುಖ ಅಂಶಗಳಾಗಿವೆ ಎಂದು ಹೇಳಿದರು.


ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಜೊತೆಗೆ ಆತ್ಮವಿಶ್ವಾಸ, ಶಿಸ್ತು, ಸಮಯಪಾಲನೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜೀವನ ಸ್ಮರಣೆ ಶಿಕ್ಷಕರ ದಿನಾಚರಣೆಯ ಹಿನ್ನೆಲೆಯಲ್ಲಿ ಭಾರತದ ಮಹಾನ್ ತತ್ವಜ್ಞಾನಿ, ಶಿಕ್ಷಣ ತಜ್ಞ ಹಾಗೂ ಮಾಜಿ ರಾಷ್ಟ್ರಪತಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜೀವನ ಮತ್ತು ಸಾಧನೆಗಳ ಕುರಿತು ಕೂಡ ಡಾ. ಅಮ್ಜದ್ ಶರೀಫ್ ಅವರು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.ಶಿಕ್ಷಕರಿಗೆ ಸಮಾಜದಲ್ಲಿ ಅತ್ಯಂತ ಗೌರವದ ಸ್ಥಾನವಿದ್ದು, ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ತಮ್ಮನ್ನು ವಿದ್ಯಾಭ್ಯಾಸದ ಮೂಲಕ ರೂಪಿಸುವ ಶಿಕ್ಷಕರನ್ನು ಸದಾ ಗೌರವಿಸಬೇಕು. ಶಿಕ್ಷಕರು ನೀಡುವ ಮಾರ್ಗದರ್ಶನ ಮತ್ತು ಜ್ಞಾನವನ್ನು ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ವ್ಯಕ್ತಿಗಳಾಗಿ ಬೆಳೆದು ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಅವರು ಕರೆ ನೀಡಿದರು.ವಿಶೇಷ ಉಪನ್ಯಾಸದ ಸಂದರ್ಭದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಅವರು, ಆರೋಗ್ಯ ಕ್ಷೇತ್ರದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಅಗತ್ಯವಾದ ಹಲವು ಸಲಹೆಗಳನ್ನು ನೀಡಿದರು. ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಹೊಸ ಉತ್ಸಾಹ ಹಾಗೂ ಆತ್ಮವಿಶ್ವಾಸ ಮೂಡಿಸುವಲ್ಲಿ ಯಶಸ್ವಿಯಾಯಿತು.






ಸಂಸ್ಥೆಯ ವತಿಯಿಂದ ಕೃತಜ್ಞತೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು ಮಾತನಾಡಿ, ಪ್ರತೀ ಶನಿವಾರ ವಿದ್ಯಾರ್ಥಿಗಳಿಗೆ ವಿವಿಧ ಕ್ಷೇತ್ರಗಳ ತಜ್ಞರಿಂದ ವಿಶೇಷ ಉಪನ್ಯಾಸಗಳನ್ನು ಆಯೋಜಿಸುವ ಮೂಲಕ ಅವರ ಜ್ಞಾನವನ್ನು ವಿಸ್ತರಿಸುವುದು ಹಾಗೂ ವೃತ್ತಿಪರವಾಗಿ ಉತ್ತಮವಾಗಿ ರೂಪಿಸುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು. ಇಂದಿನ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಯುನಾನಿ ಪದ್ಧತಿಯ ಮಹತ್ವ, ನರ್ಸಿಂಗ್ ವೃತ್ತಿಯ ಮಹತ್ವ ಹಾಗೂ ಶಿಕ್ಷಕರ ದಿನಾಚರಣೆಯ ಮಹತ್ವ ಕುರಿತು ವಿದ್ಯಾರ್ಥಿಗಳಿಗೆ ಅಮೂಲ್ಯವಾದ ಮಾಹಿತಿಯನ್ನು ನೀಡಿದ ಡಾ. ಅಮ್ಜದ್ ಶರೀಫ್ ಅವರಿಗೆ ಸಂಸ್ಥೆಯ ಅಧ್ಯಕ್ಷರಾದ ಇರ್ಫಾನ್ ಕೆ, ಕಾರ್ಯದರ್ಶಿಯಾದ ಇರ್ಷಾದ್ ಕೆ, ಎಲ್ಲಾ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳ ಪರವಾಗಿ ಹೃತ್ಪೂರ್ವಕ ಧನ್ಯವಾದಗಳನ್ನು ಸಲ್ಲಿಸಿದರು.

ವಿದ್ಯಾರ್ಥಿಗಳಿಗೆ ಇಂತಹ ವಿಶೇಷ ಉಪನ್ಯಾಸಗಳು ಪಠ್ಯಕ್ರಮದ ಜ್ಞಾನವನ್ನು ಮೀರಿ ಪ್ರಾಯೋಗಿಕ ಹಾಗೂ ವೃತ್ತಿಪರ ಅರಿವು ನೀಡುವುದರ ಜೊತೆಗೆ, ಭವಿಷ್ಯದಲ್ಲಿ ಆತ್ಮವಿಶ್ವಾಸದಿಂದ ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲು ಪ್ರೇರಣೆ ನೀಡುತ್ತವೆ ಎಂದು ಪ್ರಾಚಾರ್ಯರು ತಿಳಿಸಿದರು.ಈ ಸಂದರ್ಭದಲ್ಲಿ ಸರ್ಕಾರಿ ಯುನಾನಿ ಆಸ್ಪತ್ರೆಯ ಫಾರ್ಮಾಸಿಸ್ಟ್ ಭಾರ್ಗವ ಸೇರಿದಂತೆ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್‌ನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ವಿದ್ಯಾರ್ಥಿಗಳ ಸಕ್ರಿಯ ಭಾಗವಹಿಸುವಿಕೆಯೊಂದಿಗೆ ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು.








## ಪರಪ್ಪನ ಅಗ್ರಹಾರ ಜೈಲಿನಲ್ಲೇ ವಾಚರ್ ಮೇಲೆ ಮಾರಣಾಂತಿಕ ಹಲ್ಲೆ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಕಟ್ಟುನಿಟ್ಟಿನ ನಿಯಮ ಪಾಲಿಸುತ್ತಿದ್ದ ಜೈಲು ವೀಕ್ಷಕನ ಮೇಲೆಯೇ ಕೈದಿಗಳು ಮಾರಣಾಂತಿಕ ಹಲ್ಲೆ ನಡೆಸಿರುವ ಆರೋಪ ಕೇಳಿಬಂದಿದೆ. ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ಆರೋಪಿಗಳೆನ್ನಲಾದ ಐವರು ಕೈದಿಗಳು ವಾಚರ್ ಮಂಜುನಾಥ್ ಹವೇಲಿ ಅವರನ್ನು ಕೊಲೆ ಮಾಡಲು ಯತ್ನಿಸಿದ್ದಾರೆ ಎಂದು ದೂರು ದಾಖಲಾಗಿದೆ.**




ಸೆಪ್ಟೆಂಬರ್ 2ರಂದು ಬೆಳಗ್ಗೆ ಸುಮಾರು 11.30ರ ವೇಳೆಗೆ ಪರಪ್ಪನ ಅಗ್ರಹಾರ ಜೈಲಿನ ಶಿಕ್ಷಾ ಬಂಧಿ ವಿಭಾಗದಲ್ಲಿ ಘಟನೆ ನಡೆದಿದೆ. ಮಂಜುನಾಥ್ ಅವರು ಕೈದಿಗಳ ಅವಧಿಪೂರ್ವ ಬಿಡುಗಡೆಗೆ ಸಂಬಂಧಿಸಿದ ವಿಷಯ ನಿರ್ವಾಹಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಈ ಸಂಬಂಧ ವಿಭಾಗಕ್ಕೆ ತೆರಳಿದ್ದರು. ಈ ವೇಳೆ ಮೊಹಮ್ಮದ್ ಮುಜಾಮಿಲ್, ಅಬ್ದುಲ್ ಶಫಾನ್, ಮೊಹಮ್ಮದ್ ರಿಜ್ವಾನ್, ನಯಾಜ್ ಹಾಗೂ ಕಲಂದರ್ ಶಫಿ ಎಂಬ ಐವರು ಕೈದಿಗಳು ಅವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಆರೋಪಿಗಳಿಂದ ಏಕಾಏಕಿ ಮೂಗಿಗೆ ಗುದ್ದಿಸಿಕೊಂಡ ಮಂಜುನಾಥ್ ಅವರನ್ನು ಬಳಿಕ ಕೊಠಡಿ ಸಂಖ್ಯೆ 4ಕ್ಕೆ ಎಳೆದೊಯ್ದು ಹಲ್ಲೆ ನಡೆಸಲಾಗಿದೆ.

## ಪತ್ರಿಕಾ ವಿತರಕರ ಸೇವೆ ಶ್ಲಾಘನೀಯ ರವೀಂದ್ರ ಬಾಕಳೆ

❑ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಮಳೆ, ಚಳಿ, ಗಾಳಿಯನ್ನೂ ಲೆಕ್ಕಿಸದೆ ಪ್ರತಿನಿತ್ಯ ಬೆಳಗಿನ ಜಾವವೇ ಪತ್ರಿಕೆಗಳನ್ನು ಪಡೆದು ಮನೆ ಮನೆಗೆ ತೆರಳಿ ಓದುಗರಿಗೆ ಸುದ್ದಿಯನ್ನು ತಲುಪಿಸುವ ಪತ್ರಿಕಾ ವಿತರಕರ ಸೇವೆ ಶ್ಲಾಘನೀಯವಾಗಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯದರ್ಶಿ ಹಾಗೂ ಹಿರಿಯ ಪತ್ರಕರ್ತ ರವೀಂದ್ರ ಬಾಕಳೆ ಹೇಳಿದರು.**

ಪಟ್ಟಣದ ಹಳೆ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಆಯೋಜಿಸಿದ್ದ ಪತ್ರಿಕಾ ವಿತರಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪತ್ರಿಕೆ ಪ್ರಕಟಿಸುವಷ್ಟೇ ಅವುಗಳನ್ನು ಓದುಗರ ಮನೆ ಬಾಗಿಲಿಗೆ ತಲುಪಿಸುವ ವಿತರಕರ ಪಾತ್ರವೂ ಮಹತ್ವದ್ದಾಗಿದೆ ಎಂದರು.



ತಾಲೂಕು ಸಂಘದ ಅಧ್ಯಕ್ಷ ಪವಾಡಪ್ಪ ಚೌಡಕಿ ಮಾತನಾಡಿ, ಕಡಿಮೆ ಆದಾಯದಲ್ಲಿಯೇ ನಿತ್ಯ ಜನರಿಗೆ ಸುದ್ದಿಯನ್ನು ತಲುಪಿಸುವ ಮೂಲಕ ಪತ್ರಿಕಾ ವಿತರಕರು ಸಮಾಜಕ್ಕೆ ಅಳಿಲು ಸೇವೆ ಸಲ್ಲಿಸುತ್ತಿದ್ದಾರೆ. ವಿತರಕರ ಯಾವುದೇ ಸಮಸ್ಯೆಗಳಿದ್ದರೂ ಸಂಘಟನೆ ಅವರ ನೆರವಿಗೆ ನಿಲ್ಲಲಿದೆ. ಕಾರ್ಮಿಕ ಇಲಾಖೆಯಿಂದ ದೊರೆಯುವ ಸೌಲಭ್ಯಗಳನ್ನು ವಿತರಕರಿಗೆ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಪತ್ರಕರ್ತರಾದ ಪರಮಶಿವಮೂರ್ತಿ ಮಾಟಲದಿನ್ನಿ, ಶರಣಪ್ಪ ಲೈನದ, ಅನಿಲ್ ಕಮ್ಮಾರ, ಭೀಮನಗೌಡ ಪಾಟೀಲ, ಸಂಗಯ್ಯ ಲೂತಿಮಠ, ಮಲ್ಲಿಕಾರ್ಜುನ ದೋಟಿಹಾಳ, ಶರಣಪ್ಪ ಹೊಮ್ಮಿನಾಳ, ಮಹೇಶ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಕಂಪ್ಲಿಯ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ ಸಡಗರದ 'ಶಿಕ್ಷಕರ ದಿನಾಚರಣೆ':

## ಗಮನ ಸೆಳೆದ ಮಕ್ಕಳ ಸಾಂಸ್ಕೃತಿಕ ವೈಭವ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ: ಇಲ್ಲಿನ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ ಭಾರತದ ಮಾಜಿ ರಾಷ್ಟ್ರಪತಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಅಂಗವಾಗಿ 'ಶಿಕ್ಷಕರ ದಿನಾಚರಣೆ'ಯನ್ನು ಅತ್ಯಂತ ಸಡಗರ–ಸಂಭ್ರಮದಿಂದ ಆಚರಿಸಲಾಯಿತು.**

ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದ ಶಾಲೆಯ ಮುಖ್ಯಗುರುಗಳಾದ ಬಡಿಗೇರ್ ಜಿಲಾನಸಾಬ್ ಅವರು, "ಭಾರತೀಯ ಸಂಸ್ಕೃತಿಯಲ್ಲಿ ಗುರುಗಳಿಗೆ ಅತ್ಯುನ್ನತ ಸ್ಥಾನವಿದೆ. ಶಿಕ್ಷಣದ ಜೊತೆಗೆ ಮಕ್ಕಳಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸುವುದು ಇಂದಿನ ಅಗತ್ಯವಾಗಿದೆ. ವಿದ್ಯಾರ್ಥಿ ದೆಸೆಯಲ್ಲೇ ಮಕ್ಕಳಿಗೆ ಇಂತಹ ಸಾಂಸ್ಕೃತಿಕ ಹಾಗೂ ಆದರ್ಶ ಹಿನ್ನೆಲೆಯ ಪರಿಚಯ ಮಾಡಿಸಬೇಕು," ಎಂದು ಕರೆ ನೀಡಿದರು. ದಿನಾಚರಣೆಯ ಅಂಗವಾಗಿ ಶಾಲೆಯ




ಪುಟ್ಟ ಮಕ್ಕಳು ಆಕರ್ಷಕ ಸಾಂಸ್ಕೃತಿಕ ವೇಷಭೂಷಣಗಳನ್ನು ಧರಿಸಿ ಬಂದು ಎಲ್ಲರ ಗಮನ ಸೆಳೆದರು. ಮಕ್ಕಳ ಮುದ್ದಾದ ನೃತ್ಯ ಮತ್ತು ಸಡಗರವು ಕಾರ್ಯಕ್ರಮದ ಕಳೆಯನ್ನು ಹೆಚ್ಚಿಸಿತ್ತು.

ವಿದ್ಯಾರ್ಥಿಗಳು ತಮ್ಮ ನೆಚ್ಚಿನ ಶಿಕ್ಷಕರಿಗೆ ಗೌರವ ವಂದನೆ ಸಲ್ಲಿಸಿ ಕೇಕ್ ಕತ್ತರಿಸಿ ಕೃತಜ್ಞತೆ ಸಮರ್ಪಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಕಿಯರಾದ ಕೆ.ಶ್ವೇತಾ, ಜೆ.ಅಕ್ಷತಾ, ಕೊಲ್ಕರ್ ಉಮಾ, ವರ್ಷಾ ಮಜುಂದಾರ್, ಮಠದ ಸುನೀತಾ, ಡಿ.ಉಮಾ, ಖಜಾಬನಿ ಹಾಗೂ ಸಹಾಯಕಿ ಶರ್ಮಾಸಬಿ ಸೇರಿದಂತೆ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಜಾಲಿಹಾಳ ಹೋಬಳಿಯಲ್ಲಿ ಸಿಂಧನೂರು ತಾಲ್ಲೂಕಿನ ಮೊದಲ ಪ್ರಜಾಸೇವಾ ಅಭಿಯಾನ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲ್ಲೂಕಿನ ಮೊದಲ ಪ್ರಜಾಸೇವಾ ಅಭಿಯಾನವನ್ನು ಜಾಲಿಹಾಳ ಹೋಬಳಿಯಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು. ಜಾಲಿಹಾಳ ಹೋಬಳಿಯ ರಾಜರಾಜೇಶ್ವರಿ ಕಲ್ಯಾಣ ಮಂಟಪದಲ್ಲಿ ನಡೆದ ಜನಸಂಪರ್ಕ ಸಭೆಯನ್ನು ಶಾಸಕ ಶ್ರೀ ಹಂಪನಗೌಡ ಬಾದರ್ಲಿ ಅವರು ಉದ್ಘಾಟಿಸಿದರು.**

ಸರ್ಕಾರದ ವಿವಿಧ ಇಲಾಖೆಗಳ ಸೇವೆ ಹಾಗೂ ಸೌಲಭ್ಯಗಳನ್ನು ಸಾರ್ವಜನಿಕರ ಮನೆಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಆಯೋಜಿಸಲಾಗಿದ್ದ ಈ ಪ್ರಜಾಸೇವಾ ಅಭಿಯಾನದಲ್ಲಿ ವಿವಿಧ ಇಲಾಖೆಗಳ ವತಿಯಿಂದ ಸಾರ್ವಜನಿಕರು ಮತ್ತು ಫಲಾನುಭವಿಗಳಿಗೆ ಹಲವು ಸೌಲಭ್ಯಗಳನ್ನು ಒದಗಿಸಲಾಯಿತು.

ಅಭಿಯಾನದ ಪ್ರಮುಖ ಸೇವೆಗಳು:

– ಕಂದಾಯ ಇಲಾಖೆ ವತಿಯಿಂದ ದುರ್ಗಾನಗರ, ಸತ್ಯನಗರ, ಸತ್ಯಾವತಿ ಕ್ಯಾಂಪ್, ರಂಗಾಪುರ ಕ್ಯಾಂಪ್ ಹಾಗೂ ತಾಯಮ್ಮ ಕ್ಯಾಂಪ್‌ಗಳ ಫಲಾನುಭವಿಗಳಿಗೆ ಗ್ರಾಮ ಹಕ್ಕುಪತ್ರಗಳನ್ನು ವಿತರಿಸಲಾಯಿತು.

– ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ಅಆಕಔ) ವತಿಯಿಂದ ಪೋಷಣ್ ಅಭಿಯಾನದ ಕುರಿತು ಪ್ರಾತ್ಯಕ್ಷಿಕೆ ಹಾಗೂ ಮಾಹಿತಿ ನೀಡಲಾಯಿತು.

– ಕೃಷಿ ಇಲಾಖೆ ವತಿಯಿಂದ ಅರ್ಹ ಫಲಾನುಭವಿಗಳಿಗೆ ಸ್ಪ್ರಿಂಕ್ಲರ್ ಪೈಪ್ ಸೆಟ್‌ಗಳನ್ನು ವಿತರಿಸಲಾಯಿತು.

– ಫಲಾನುಭವಿಗಳಿಗೆ ಸುಕನ್ಯಾ ಸಮೃದ್ಧಿ ಯೋಜನೆಯ ಖಾತೆ ಪಾಸ್‌ಬುಕ್‌ಗಳನ್ನು ವಿತರಿಸಲಾಯಿತು.

– ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ವತಿಯಿಂದ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಿ ಸಾರ್ವಜನಿಕರಿಗೆ ಆರೋಗ್ಯ ಸೇವೆ ಒದಗಿಸಲಾಯಿತು.

– ರಾಯಚೂರು ಕೃಷಿ ವಿಶ್ವವಿದ್ಯಾಲಯದ ಕೃಷಿ ವಿಜ್ಞಾನಿ ಶ್ರೀ ಬಸವಣ್ಣೆಪ್ಪ ಅವರು ನೀರಿನ ಕೊರತೆಯ ಪರಿಸ್ಥಿತಿಯಲ್ಲಿ ಭತ್ತದ ಬದಲಾಗಿ ಕಡಿಮೆ ನೀರು ಅಗತ್ಯವಿರುವ ಪರ್ಯಾಯ ಬೆಳೆಗಳನ್ನು ಬೆಳೆಯುವ ಕುರಿತು ರೈತರಿಗೆ ಉಪನ್ಯಾಸ ನೀಡಿದರು. ಲಭ್ಯವಿರುವ ನೀರಿನ ಪ್ರಮಾಣವನ್ನು ಆಧರಿಸಿ ಪರ್ಯಾಯ ಬೆಳೆ ಪದ್ಧತಿಯನ್ನು ಅಳವಡಿಸಿಕೊಳ್ಳುವಂತೆ ರೈತರಿಗೆ ಸಲಹೆ ನೀಡಿದರು.

– ಗ್ರಾಮ ಒನ್ ಆಪರೇಟರ್‌ಗಳ ಮೂಲಕ ಸಾರ್ವಜನಿಕರಿಂದ ವಿವಿಧ ಅರ್ಜಿಗಳನ್ನು ಸ್ವೀಕರಿಸಿ ಖಕಉಖಖ ಪೋರ್ಟಲ್‌ನಲ್ಲಿ ದಾಖಲಿಸುವ ವ್ಯವಸ್ಥೆ ಮಾಡಲಾಯಿತು.




ಪ್ರಜಾಸೇವಾ ಅಭಿಯಾನದ ಮೂಲಕ ಒಂದೇ ಸ್ಥಳದಲ್ಲಿ ವಿವಿಧ ಇಲಾಖೆಗಳ ಸೇವೆಗಳನ್ನು ಪಡೆಯಲು ಅವಕಾಶ ಕಲ್ಪಿಸಿರುವುದರಿಂದ ಸಾರ್ವಜನಿಕರಿಗೆ ಸಾಕಷ್ಟು ಅನುಕೂಲವಾಯಿತು. ಕಾರ್ಯಕ್ರಮದ ನಂತರ ಸಾರ್ವಜನಿಕರಿಗೆ ಊಟದ ವ್ಯವಸ್ಥೆಯನ್ನೂ ಮಾಡಲಾಗಿತ್ತು. ಕಾರ್ಯಕ್ರಮದಲ್ಲಿ ಸಿಂಧನೂರು ತಹಶೀಲ್ದಾರ್, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ (ಇಔ), ನಗರಸಭೆ ಪೌರಾಯುಕ್ತರು, ಜಾಲಿಹಾಳ ಹೋಬಳಿ ಆಖಿ, ಖಖ, ಎಲ್ಲಾ ಗ್ರಾಮ ಆಡಳಿತ ಅಧಿಕಾರಿಗಳು (ಗ್ರಾ.ಆ.ಅ.) ಹಾಗೂ ವಿವಿಧ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಜನರ ಸಮಸ್ಯೆಗಳಿಗೆ ಸ್ಥಳದಲ್ಲೇ ಸ್ಪಂದಿಸಿ, ಸರ್ಕಾರಿ ಸೇವೆಗಳನ್ನು ಜನರ ಬಳಿಗೆ ತಲುಪಿಸುವ ನಿಟ್ಟಿನಲ್ಲಿ ಜಾಲಿಹಾಳ ಹೋಬಳಿಯಲ್ಲಿ ನಡೆದ ಮೊದಲ ಪ್ರಜಾಸೇವಾ ಅಭಿಯಾನ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಯಿತು.

## ಸಾಹಿತ್ಯ ಸಿಂಚನ

### ಚಂದಿರನೊಂದಿಗೆ ಮಾತುಕತೆ

ಮೌನದ ರಾತ್ರಿಯಲ್ಲಿ ಚಂದಿರ ಬಂದನು,
ಬೆಳ್ಳಿಯ ಬೆಳಕಿನಿಂದ ಮನವ ತುಂಬಿದನು.

"ಏಕೆ ಇಷ್ಟು ಮೌನ?" ಎಂದು ಕೇಳಿದನು,
ನನ್ನ ಕನಸುಗಳ ಕಥೆಯನ್ನು ಕೇಳಿದನು.

ನಕ್ಷತ್ರಗಳ ನಡುವೆ ನಗುತ್ತಾ ಕುಳಿತನು,
ನನ್ನ ನೋವಿಗೆ ಮೌನದ ಸಾಂತ್ವನ ನೀಡಿದನು.

"ಕನಸು ಕಾಣು, ಹೆದರಬೇಡ" ಎಂದನು,
ಕತ್ತಲೆಯಲ್ಲೂ ಬೆಳಕನ್ನು ಹುಡುಕು ಎಂದನು.

ನನ್ನ ಮಾತುಗಳನ್ನೆಲ್ಲ ತಾಳ್ಮೆಯಿಂದ ಕೇಳಿ,
ಬೆಳಕಿನ ಹಾದಿಯೊಂದನ್ನು ತೋರಿದನು.

ರಾತ್ರಿ ಮುಗಿದರೂ ನೆನಪು ಉಳಿಯಿತು,
ಚಂದಿರನ ಮಾತು ಹೃದಯದಲ್ಲಿ ಮೊಳಗಿತು.

ಆಕಾಶ ದೂರವಾದರೂ ಸ್ನೇಹ ಹತ್ತಿರವಾಯಿತು,
ಚಂದಿರನೊಂದಿಗೆ ಮಾತುಕತೆ ಮನಸಿಗೆ ನೆಮ್ಮದಿ ನೀಡಿತು

# ವೃತ್ತಿಯಲ್ಲಿ ಗುರು ನಿವೃತ್ತಿಯಲ್ಲಿ ಗೋವುಗಳ ಸೇವಕ

## 80ರ ಹರೆಯದಲ್ಲೂ ಯುವಕರಂತೆ ಚಟುವಟಿಕೆ; ಜೆ. ಶರಣಪ್ಪ ಅವರ ಸೇವಾ ಜೀವನಕ್ಕೆ ಎಲ್ಲೆಡೆ ಮೆಚ್ಚುಗೆ

❏ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ವಯಸ್ಸು 80 ದಾಟಿದರೂ ಉತ್ಸಾಹ ಮಾತ್ರ ಯುವಕರದ್ದೇ! ತಾಲೂಕಿನ ಕಡೇಕೊಪ್ಪ ಗ್ರಾಮದ ನಿವೃತ್ತ ಶಿಕ್ಷಕ ಜೆ. ಶರಣಪ್ಪ ಅವರು ನಿವೃತ್ತ ಜೀವನವನ್ನು ವಿಶ್ರಾಂತಿಗೆ ಸೀಮಿತಗೊಳಿಸದೆ ಜಾನುವಾರುಗಳ ಆರೈಕೆ ಹಾಗೂ ಸೇವೆಯಲ್ಲಿ ತೊಡಗಿಸಿಕೊಂಡು ಗಮನ ಸೆಳೆಯುತ್ತಿದ್ದಾರೆ.**

ವೃತ್ತಿ ಜೀವನದಲ್ಲಿ ಶಿಕ್ಷಕರಾಗಿ ಅನೇಕ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಶರಣಪ್ಪ ಅವರು, ನಿವೃತ್ತಿಯ ಬಳಿಕವೂ ತಮ್ಮ ದಿನಚರಿಯಲ್ಲಿ ಶಿಸ್ತು ಮತ್ತು ಚಟುವಟಿಕೆಯನ್ನು ಉಳಿಸಿಕೊಂಡಿದ್ದಾರೆ. ಪ್ರತಿದಿನ ಬೆಳಗಿನ ಜಾವ ಎದ್ದು ಜಾನುವಾರುಗಳ ಆರೈಕೆ ಮಾಡುವುದು, ಅವುಗಳಿಗೆ ಆಹಾರ?ನೀರು ನೀಡುವುದು ಹಾಗೂ ಅವುಗಳೊಂದಿಗೆ ಸಮಯ



ಕಳೆಯುವುದು ಅವರ ನಿತ್ಯದ ಕಾಯಕವಾಗಿದೆ. ಶಿಕ್ಷಕರಾಗಿದ್ದಾಗ ಆಟ, ಓಟ ಹಾಗೂ ವ್ಯಾಯಾಮಕ್ಕೆ ಹೆಚ್ಚಿನ ಮಹತ್ವ ನೀಡುತ್ತಿದ್ದ ಅವರು, ಇಂದಿಗೂ ದೈಹಿಕ ಚಟುವಟಿಕೆಯಿಂದ ದೂರವಾಗಿಲ್ಲ.

ವಯಸ್ಸಿನ ಇಳಿವಯಸ್ಸಿನಲ್ಲೂ ಕೆಲಸದ ಮೇಲಿನ ಆಸಕ್ತಿ ಹಾಗೂ ಚೈತನ್ಯ ಅವರ ವಿಶೇಷತೆ. ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಗೆ ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಸೇರಿದಂತೆ ಹಲವು ಗೌರವಗಳು ಅವರಿಗೆ ಸಂದಿವೆ. ಆದರೆ ಪ್ರಶಸ್ತಿ?ಪುರಸ್ಕಾರಗಳಿಗಿಂತ ಸೇವೆಯಲ್ಲಿಯೇ ಸಂತೃಪ್ತಿ ಕಾಣುವ ಅವರು, ನಿವೃತ್ತಿಯ ನಂತರ ಮೂಕ ಪ್ರಾಣಿಗಳ ಸೇವೆಗೆ ತಮ್ಮ ಬದುಕನ್ನು ಮುಡಿಪಾಗಿಟ್ಟಿದ್ದಾರೆ. ಮೂಕ ಪ್ರಾಣಿಗಳೊಂದಿಗೆ ಆತ್ಮೀಯ ನಂಟು ಶಿಕ್ಷಕರ ದಿನಾಚರಣೆಯ ಅಂಗವಾಗಿ ಶನಿವಾರ ಬೆಳಗಿನ ಜಾವ ಜಾನುವಾರುಗಳ ಆರೈಕೆಯಲ್ಲಿ ತೊಡಗಿದ್ದ ಶರಣಪ್ಪ ಅವರ ದೃಶ್ಯ ವಿಶೇಷ ಗಮನ ಸೆಳೆಯಿತು.

ಮಕ್ಕಳಿಗೆ ಜ್ಞಾನ ಹಂಚಿದ ಶಿಕ್ಷಕರು ಇಂದು ಮೂಕ ಪ್ರಾಣಿಗಳ ಸೇವೆಯಲ್ಲಿ ತೊಡಗಿರುವುದು ಅವರ ಮಾನವೀಯ ಮನಸ್ಸಿಗೆ ಸಾಕ್ಷಿಯಾಗಿದೆ. "80 ವರ್ಷ ವಯಸ್ಸಾಗಿದ್ದರೂ ಶರಣಪ್ಪ ಅವರು ಇಂದಿಗೂ ಯುವಕರಂತೆ ಕೆಲಸ ಮಾಡುತ್ತಾರೆ. ಎಲ್ಲರೊಂದಿಗೂ ಆತ್ಮೀಯವಾಗಿ ಬೆರೆಯುವ ಅವರ ಜೀವನಶೈಲಿ ಮತ್ತು ಸೇವಾ ಮನೋಭಾವ ಎಲ್ಲರಿಗೂ ಮಾದರಿ" ಎಂದು ಅವರ ಗೆಳೆಯ ಸಿದ್ದಪ್ಪ ಕಾತರಕಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ನಿರುದ್ಯೋಗಿ ಯುವಕರು ಯುವತಿಯರು ಇಂತಹ ಉದ್ಯೋಗ ಮೇಳಗಳಲ್ಲಿ ಭಾಗವಹಿಸಿ ಉದ್ಯೋಗ ಮೇಳದ ಪ್ರಯೋಜನವನ್ನು ಪಡೆದುಕೊಳ್ಳಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಸ್ ಯಥೀಂದ್ರ ಸಿದ್ರಾಮಯ್ಯ ಕರೆ

❏ ನೈಜ್ಯ ದೆಸೆ ನ್ಯೂಸ್

**ತಾಂಡವಪುರ ಸೆಪ್ಟೆಂಬರ್ 5 ಜನಸ್ಪಂದನ ಟ್ರಸ್ಟ್ (ರಿ.) ವತಿಯಿಂದ ಮೈಸೂರು ನಗರದ ಚಿಕ್ಕಮ್ಮಾನಿಕೇತನ ಕಲ್ಯಾಣ ಮಂಟಪದಲ್ಲಿ ಮಾಜಿ ಶಾಸಕ ಎಂ ಕೆ ಸೋಮಶೇಖರ್ ಅವರ ನೇತೃತ್ವದಲ್ಲಿ ಆಯೋಜಿಸಲಾಗಿದ್ದ ಬೃಹತ್ ಉದ್ಯೋಗ ಮೇಳವನ್ನು ಜ್ಯೋತಿ ಬೆಳಗಿಸುವ ಮೂಲಕ ಮೈಸೂರು ಜಿಲ್ಲೆ ಉಸ್ತುವಾರಿ ಸಚಿವ ಹಾಗೂ ನಗರಾಭಿವೃದ್ಧಿ ಸಚಿವರಾದ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯನವರು ಉದ್ಘಾಟಿಸಿ,**

ಉದ್ಯೋಗ ಮೇಳಕ್ಕೆ ಚಾಲನೆ ನೀಡಿ ಶುಭ ಹಾರೈಸಿದರು ಬಳಿಕ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಮಾಜಿ ಶಾಸಕ ಎಂ ಕೆ ಸೋಮಶೇಖರ್ ಅವರು ಯುವಕ ಯುವಕರಿಗೆ ಉದ್ಯೋಗ ಸಮಸ್ಯೆಯನ್ನು ಹೊರಿತು ಈ ಭಾಗದಲ್ಲಿ ಬೃಹತ್ ಉದ್ಯೋಗ



ಮೇಳವನ್ನು ಹಮ್ಮಿಕೊಂಡು ಈ ಉದ್ಯೋಗ ಮೇಳದಲ್ಲಿ ಹಲವಾರು ಸ್ಥಳೀಯ ಕಂಪನಿಗಳು ಭಾಗವಹಿಸಿ ಯುವಕ ಯುವತಿಯರ ದಾಖಲೆ ಪಡೆದುಕೊಂಡು ಉದ್ಯೋಗ ನೀಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುತ್ತಾರೆ ಆ ನಿಟ್ಟಿನಲ್ಲಿ ಮಾಜಿ ಶಾಸಕ ಎಂಕೆ ಸೋಮಶೇಖರ್ ಅವರು ಇಂತಹ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳುವ ಮೂಲಕ ಜನಪರವಾದ ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು

ಈ ಸಂದರ್ಭದಲ್ಲಿ ಜನಸ್ಪಂದನ ಟ್ರಸ್ಟಿನ ಅಧ್ಯಕ್ಷರಾದ ಹಾಗೂ ಮಾಜಿ ಶಾಸಕರಾದ ಎಂ.ಕೆ. ಸೋಮಶೇಖರ್, ಶಾಸಕರಾದ ಹೆಚ್. ಎಂ. ಗಣೇಶ್ ಪ್ರಸಾದ್, ಹಿರಿಯ ಪತ್ರಕರ್ತ ಹಾಗೂ ವಿಧಾನ ಪರಿಷತ್ ಸದಸ್ಯ ಕೆ. ಶಿವಕುಮಾರ್, ನಗರ ಕಾಂಗ್ರೆಸ್ ಅಧ್ಯಕ್ಷರಾದ ಆರ್.ಮೂರ್ತಿ, ಕೆಪಿಸಿಸಿ ವಕ್ತಾರರಾದ ಶ್ರೀ ಎಂ. ಲಕ್ಷ್ಮಣ್, ಹೆಚ್.ಎ. ವೆಂಕಟೇಶ್, ಮಾಜಿ ಮಹಾಪೌರರಾದ ನಾರಾಯಣ್, ಶ್ರೀಮತಿ ಪುಷ್ಪಾಲತಾ ಚಿಕ್ಕಣ್ಣ, ಮಾಜಿ ಉಪ ಮಹಾಪೌರರಾದ ಸಿದ್ದರಾಜು, ನಗರಪಾಲಿಕೆ ಮಾಜಿ ಸದಸ್ಯರಾದ ಜೆ.ಗೋಪಿ ಸೇರಿದಂತೆ ಹಲವು ಗಣ್ಯರು ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಉದ್ಯೋಗ ಆಕಾಂಕ್ಷಿಗಳು ವಿವಿಧ ಕಂಪನಿಯ ಅಧಿಕಾರಿಗಳು ಈ ಒಂದು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು

# ನೇಪಾಳದಲ್ಲಿ ಮತ್ತೆ ಪ್ರವಾಹದ ಆತಂಕ

❏ ನೈಜ್ಯ ದೆಸೆ ನ್ಯೂಸ್

ದಾರ್ಚುಲಾ, ಸೆ.5– ನೇಪಾಳದ ದಾರ್ಚುಲಾ ಜಿಲ್ಲೆಯ ಅಪಿ ಹಿಮಾಲ್ ಗ್ರಾಮೀಣ ಪುರಸಭೆಯ ಭಟ್ಟರ್ ಪ್ರದೇಶದಲ್ಲಿ ಸಂಭವಿಸಿದ ಭಾರೀ ಭೂಕುಸಿತದಿಂದ ಚೌಲಾನಿ (ಚಮೇಲಿಯಾ) ನದಿಯ ಹರಿವಿಗೆ ಅಡ್ಡಿಯಾಗಿದ್ದು, ತಗ್ಗು ಪ್ರದೇಶಗಳಲ್ಲಿ ಹಠಾತ್ ಪ್ರವಾಹದ ಭೀತಿ ಎದುರಾಗಿದೆ.



ಭೂಕುಸಿತದಿಂದ ಅಪಾರ ಪ್ರಮಾಣದ ಮಣ್ಣು ಮತ್ತು ಅವಶೇಷಗಳು ನದಿಗೆ ಬಿದ್ದಿರುವುದರಿಂದ ನೀರಿನ ಸುಗಮ ಹರಿವಿಗೆ ತೀವ್ರ ಅಡ್ಡಿಯುಂಟಾಗಿದೆ. ನದಿಗೆ ಅಡ್ಡಲಾಗಿ ಬಿದ್ದಿರುವ ಅವಶೇಷಗಳಿಂದ ಹರಿವು ಭಾಗಶಃ ಸ್ಥಗಿತಗೊಂಡಿದ್ದು, ಮಳೆ ಮುಂದುವರಿದರೆ ನದಿಯ ಹರಿವು ಸಂಪೂರ್ಣವಾಗಿ ತಡೆಗಟ್ಟಲ್ಪಟ್ಟು ಭಾರೀ ಪ್ರವಾಹ ಉಂಟಾಗುವ ಸಾಧ್ಯತೆಯಿದೆ ಎಂದು ಜಿಲ್ಲಾಡಳಿತ ಎಚ್ಚರಿಸಿದೆ. ಪರಿಸ್ಥಿತಿಯ ಹಿನ್ನೆಲೆಯಲ್ಲಿ ಸುದುರ್ಪಶ್ಚಿಮ್ ಮುಖ್ಯಮಂತ್ರಿ ಖಗರಾಜ್ ಭಟ್ಟ ಅವರು ಸ್ಥಳೀಯ ಆಡಳಿತ ಹಾಗೂ ಭದ್ರತಾ ಸಂಸ್ಥೆಗಳಿಗೆ ಹೈ ಅಲರ್ಟ್ ಘೋಷಿಸುವಂತೆ ಸೂಚಿಸಿದ್ದಾರೆ. ಬಾಲಂಚ್‌ನಲ್ಲಿರುವ ನೇಪಾಳ ಚಮೇಲಿಯಾ ಜಲವಿದ್ಯುತ್ ಭದ್ರತಾ ನೆಲೆಯ ಸಿಬ್ಬಂದಿಯನ್ನು ಪರಿಸ್ಥಿತಿ ಮೇಲೆ ನಿಗಾ ವಹಿಸಲು ಹಾಗೂ ತುರ್ತು ನಿರ್ವಹಣಾ ಕಾರ್ಯಗಳಿಗೆ ನಿಯೋಜಿಸಲಾಗಿದೆ. ನದಿ ಪಾತ್ರ ಹಾಗೂ ತಗ್ಗು ಪ್ರದೇಶಗಳಲ್ಲಿ ವಾಸಿಸುವ ಜನರು ಮುನ್ನೆಚ್ಚರಿಕೆ ವಹಿಸಿ ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಆಡಳಿತ ಸೂಚಿಸಿದೆ. ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ವಿಶೇಷ ಸಹಾಯವಾಣಿ ಸಂಖ್ಯೆಗಳನ್ನು ಸಹ ಬಿಡುಗಡೆ ಮಾಡಲಾಗಿದೆ. ಪ್ರವಾಹ, ಭೂಕುಸಿತದಿಂದ ಕಂಗೆಟ್ಟ ನೇಪಾಳ ಇತ್ತೀಚಿನ ದಿನಗಳಲ್ಲಿ ನೇಪಾಳದಲ್ಲಿ ಸಂಭವಿಸುತ್ತಿರುವ ಭೀಕರ ಪ್ರವಾಹ, ಹಿಮನದಿ ಕುಸಿತ ಹಾಗೂ ಭೂಕುಸಿತದಂತಹ ದುರ್ಘಟನೆಗಳಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ತ್ರಿಶೂಲಿ ನದಿ ಪಾತ್ರದಲ್ಲಿ ಸಂಭವಿಸಿದ ಅನಾಹುತಗಳು, ಸುರಂಗಗಳಲ್ಲಿ ಕಾರ್ಮಿಕರು ಸಿಲುಕಿಕೊಂಡ ಘಟನೆಗಳು ಸೇರಿದಂತೆ ಹಲವು ದುರಂತಗಳಿಂದ ದೇಶ ಇನ್ನೂ ಚೇತರಿಸಿಕೊಳ್ಳುತ್ತಿದೆ. ಮೂಲಸೌಕರ್ಯಗಳಿಗೆ ಹಾನಿಯಾಗಿದ್ದು, ಹಲವು ಪ್ರದೇಶಗಳ ನಡುವಿನ ಸಂಪರ್ಕ ಕಡಿತಗೊಂಡಿರುವ ಸಂದರ್ಭದಲ್ಲಿ ದಾರ್ಚುಲಾದಲ್ಲಿ ಚೌಲಾನಿ ನದಿಯ ಹರಿವಿಗೆ ಅಡ್ಡಿಯಾಗಿರುವುದು ಸ್ಥಳೀಯರಲ್ಲಿ ಮತ್ತಷ್ಟು ಆತಂಕ ಮೂಡಿಸಿದೆ. ಭಾರತದಲ್ಲೂ ನಿಗಾ ಚೌಲಾನಿ ಅಥವಾ ಚಮೇಲಿಯಾ ನದಿ ಅಪಿ ಹಿಮಾಲ್ ಪ್ರದೇಶದಲ್ಲಿ ಉಗಮಗೊಂಡು ಮುಂದೆ ನೇಪಾಳ–ಭಾರತ ಗಡಿಯ ಮಹಾಕಾಳಿ ನದಿಯನ್ನು ಸೇರುತ್ತದೆ. ಹೀಗಾಗಿ ದಾರ್ಚುಲಾದಲ್ಲಿನ ಬೆಳವಣಿಗೆಯ ಮೇಲೆ ಭಾರತೀಯ ಗಡಿ ಪ್ರದೇಶದ ಅಧಿಕಾರಿಗಳೂ ನಿಗಾ ವಹಿಸಿದ್ದಾರೆ. ತುರ್ತು ಪರಿಸ್ಥಿತಿ ಎದುರಾದಲ್ಲಿ ಕಾರ್ಯಾಚರಣೆ ನಡೆಸಲು ರಕ್ಷಣಾ ತಂಡಗಳನ್ನು ಸನ್ನದ್ಧವಾಗಿರಿಸಲಾಗಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಒಂದಕ್ಕಿಂತ ಹೆಚ್ಚು ವೋಟರ್ ಐಡಿ ಹೊಂದಿದ್ದರೆ ಕ್ರಿಮಿನಲ್ ಕೇಸ್

❏ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಮತದಾರರ ಪಟ್ಟಿಯಲ್ಲಿ ನಕಲಿ ಹೆಸರು, ದ್ವಿಮುಖ ನೋಂದಣಿ ಅಥವಾ ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿರುವ ಪ್ರಕರಣಗಳು ಪತ್ತೆಯಾದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಎಚ್ಚರಿಕೆ ನೀಡಿದ್ದಾರೆ.**

ಬೆಂಗಳೂರು ದಕ್ಷಿಣ ನಗರ ಜಿಲ್ಲಾ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು. ಚುನಾವಣಾ ಆಯೋಗದ ಪರಿಷ್ಕೃತ ವೇಳಾಪಟ್ಟಿಯಂತೆ ಆಗಸ್ಟ್ 24ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದ್ದು, ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಪಟ್ಟಿಗಳನ್ನು ವಿತರಿಸಲಾಗಿದೆ. ಸೆಪ್ಟೆಂಬರ್ 3ರ ಮಾಹಿತಿಯಂತೆ ನಮೂನೆ 9, 10, 11 ಹಾಗೂ ಭಾವಚಿತ್ರರಹಿತ ಕರಡು ಮತದಾರರ ಪಟ್ಟಿಯ ಮಾಹಿತಿಯನ್ನು ಪೆನ್‌ಡ್ರೈವ್ ಮೂಲಕ ಪಕ್ಷಗಳ ಪ್ರತಿನಿಧಿಗಳಿಗೆ ನೀಡಲಾಗಿದೆ.

237 ಹೆಚ್ಚುವರಿ ಎಇಆರ್‌ಒಗಳ ನೇಮಕ

ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದ ವಿಚಾರಣೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು 237 ಹೆಚ್ಚುವರಿ ಸಹಾಯಕ ಮತದಾರರ ನೋಂದಣಾಧಿಕಾರಿಗಳನ್ನು (ಎಇಆರ್‌ಒ) ನೇಮಕ ಮಾಡಲಾಗಿದೆ. ಅವರಿಗೆ ಈಗಾಗಲೇ ತರಬೇತಿ ನೀಡಲಾಗಿದ್ದು, ದಿನಕ್ಕೆ ಗರಿಷ್ಠ 50ರಿಂದ 60 ಪ್ರಕರಣಗಳ



ವಿಚಾರಣೆ ನಡೆಸುವಂತೆ ಸೂಚಿಸಲಾಗಿದೆ. ನೋಟಿಸ್ ಪಡೆದ ಮತದಾರರಿಗೆ ವಿಚಾರಣೆಗೆ ಹಾಜರಾಗಲು ಕನಿಷ್ಠ ಏಳು ದಿನಗಳ ಕಾಲಾವಕಾಶ ನೀಡಬೇಕು.

ಮೊದಲ ನೋಟಿಸ್‌ಗೆ ಹಾಜರಾಗಲು ಸಾಧ್ಯವಾಗದವರಿಗೆ ಅಗತ್ಯವಿದ್ದಲ್ಲಿ ಎರಡನೇ ನೋಟಿಸ್ ನೀಡಿ ವಿಚಾರಣೆ ನಡೆಸಬೇಕು ಎಂದು ರಮೇಶ್ ಸೂಚಿಸಿದರು. ವೃದ್ಧರು, ಅನಾರೋಗ್ಯ ಪೀಡಿತರಿಗೆ ಮನೆ ಬಳಿಯೇ ಪರಿಶೀಲನೆ ಆಸ್ಪತ್ರೆಗೆ ದಾಖಲಾಗಿರುವವರು, 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನ ಮತದಾರರನ್ನು ಕಚೇರಿಗೆ ಕರೆಸುವ ಬದಲು ಬಿಎಲ್‌ಒ ಅಥವಾ ಎಇಆರ್‌ಒಗಳು ಅವರ ಮನೆ ಅಥವಾ ಆಸ್ಪತ್ರೆಗೆ ತೆರಳಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಲಾಗಿದೆ.

ವಿಚಾರಣೆಗೆ ಹಾಜರಾಗುವ ಮತದಾರರು ಸಲ್ಲಿಸುವ ದಾಖಲೆಗಳಿಗಾಗಿ ಹಿಯರಿಂಗ್ ರಿಜಿಸ್ಟರ್ ನಿರ್ವಹಿಸಬೇಕು. ದಾಖಲೆಗಳಿಗೆ ಹಿಂಬರಹ ನೀಡಿ ಸಿಸ್ಟಮ್‌ನಲ್ಲಿ ಅಪ್‌ಲೋಡ್ ಮಾಡಬೇಕು. ವಿಚಾರಣೆಯ ದಿನಾಂಕ, ಸಮಯ ಹಾಗೂ ಸ್ಥಳವನ್ನು ನೋಟಿಸ್‌ನಲ್ಲಿ ಸ್ಪಷ್ಟವಾಗಿ ನಮೂದಿಸುವುದು ಕಡ್ಡಾಯ ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ. ದ್ವಿಮುಖ ನೋಂದಣಿಗೆ ಕಠಿಣ ಕ್ರಮ ಒಬ್ಬ ಮತದಾರನ ಹೆಸರು ಕರ್ನಾಟಕದ ಜೊತೆಗೆ ಬೇರೆ ರಾಜ್ಯದಲ್ಲಿಯೂ ಅಥವಾ ಒಂದಕ್ಕಿಂತ ಹೆಚ್ಚು ಮತದಾರರ ಪಟ್ಟಿಗಳಲ್ಲಿಯೂ ಇರುವುದಾಗಿ ಕಂಡುಬಂದರೆ ಪ್ರಜಾಪ್ರತಿನಿಧಿ ಕಾಯ್ದೆಯ ಕಲಂ 31ರಡಿ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಅದೇ ರೀತಿ ಫಾರ್ಮ್–6 ಮತ್ತು ಫಾರ್ಮ್–8ರ ಅರ್ಜಿಗಳನ್ನು ಮರುಪರಿಶೀಲಿಸಿ, ಅರ್ಹ ಪ್ರಕರಣಗಳನ್ನು ಮಾತ್ರ ಪರಿಗಣಿಸುವಂತೆ ಸೂಚಿಸಲಾಗಿದೆ.

ವಾರ್ಡ್‌ವಾರು ಜಾಗೃತಿ ಅಭಿಯಾನ

ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಪ್ರತಿ ವಾರ್ಡ್‌ಗೆ ಒಂದರಂತೆ ಧ್ವನಿವರ್ಧಕ ಅಳವಡಿಸಿದ ಆಟೋಗಳ ಮೂಲಕ ಬೆಳಗ್ಗೆ ಮತ್ತು ಸಂಜೆ ಪ್ರಚಾರ ನಡೆಸಲು ತೀರ್ಮಾನಿಸಲಾಗಿದೆ. ಶಾಲಾ–ಕಾಲೇಜುಗಳು, ವೃತ್ತಗಳು ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಬ್ಯಾನರ್‌ಗಳ ಮೂಲಕವೂ ಜಾಗೃತಿ ಮೂಡಿಸಲಾಗುತ್ತದೆ.

ಸಭೆಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಬಿಎಲ್‌ಒಗಳ ಕಾರ್ಯವೈಖರಿ, ವಿಳಾಸಗಳಲ್ಲಿನ ಲೋಪದೋಷಗಳು ಹಾಗೂ ಕ್ಷೇತ್ರ ಭೇಟಿಗೆ ಸಂಬಂಧಿಸಿದಂತೆ ಹಲವು ದೂರುಗಳನ್ನು ಸಲ್ಲಿಸಿದರು. ಈ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ರಮೇಶ್ ಸೂಚಿಸಿದರು. ಸಭೆಯಲ್ಲಿ ಅಪರ ಆಯುಕ್ತ ರಾಚಪ್ಪ, ಚುನಾವಣಾ ವಿಭಾಗದ ತಹಶೀಲ್ದಾರ್ ರಶ್ಮಿ ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ನಮ್ಮ ಕರ್ತವ್ಯ : ತಹಶೀಲ್ದಾರ್ ಜೂಗಲ್ ಮಂಜುನಾಯಕ

❏ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ರಾಜ್ಯದ ಜನರ ಶ್ರೇಯೋಭಿವೃದ್ಧಿ ದೃಷ್ಟಿಯಿಂದ ಸರ್ಕಾರ ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದ್ದು, ಈ ಎಲ್ಲಾ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸುವ ಜೊತೆಗೆ ಜನರ ಪ್ರತಿಯೊಂದು ಸಮಸ್ಯೆಗಳಿಗೆ ಸಕಾಲದಲ್ಲಿ ಸ್ಪಂದಿಸಿ, ಇತ್ಯಾರ್ಥ ಮಾಡಬೇಕು ಎಂದು ತಹಶೀಲ್ದಾರ್ ಜೂಗಲ್ ಮಂಜುನಾಯಕ ಹೇಳಿದರು.**

ಪಟ್ಟಣದ ಶಿಬಿರದಿನ್ನಿಯ ಪುರಸಭೆ ಸಮುದಾಯ ಭವನದಲ್ಲಿ ಬತಾಲೂಕು ಆಡಳಿತ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಬಾಗಿಲಿಗೆ ಬಂತುವ ಸರ್ಕಾರ ಸೇವೆಗೆ ಇರಲಿ ಸಹಕಾರದ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸರ್ಕಾರದ ನಿರ್ದೇಶನದಂತೆ ಪಿಂಚಣಿ, ವೃದ್ಯಾಪ ವೇತನ, ಗೃಹಲಕ್ಷ್ಮಿ ಸೇರಿದಂತೆ ಇನ್ನಿತರ



ಯೋಜನೆಗಳು ಜನತೆಗೆ ತಲುಪಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕೆಲಸ ಮಾಡಬೇಕು. ಬಾಗಿಲಿಗೆ ಬಂತು ಸರ್ಕಾರ–ಸೇವೆಗೆ ಇರಲಿ ಸಹಕಾರ' ಎಂಬ ಘೋಷವಾಕ್ಯದೊಂದಿಗೆ ಕರ್ನಾಟಕ ಸರ್ಕಾರವು ಆರಂಭಿಸಿರುವ 'ಪ್ರಜಾಸೇವಾ ಆಂದೋಲನ', ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಸ್ಥಳದಲ್ಲೇ ಪರಿಹಾರ ಒದಗಿಸುವ ಅತ್ಯುತ್ತಮ ವೇದಿಕೆಯಾಗಿದೆ. ಸಾರ್ವಜನಿಕರು ಈ ಅಭಿಯಾನದ ಸಂಪೂರ್ಣ ಸದ್ಬಳಕೆ ಮಾಡಿಕೊಳ್ಳಬೇಕು. ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸುವುದು ನಮ್ಮ ಕರ್ತವ್ಯವಾಗಿದೆ.

ಈ ಪ್ರಜಾಸೇವಾ ಆಂದೋಲನದಲ್ಲಿ ಟಿಎಂಸಿ 3, ಆರ್‌ಡಿಪಿಒ, ಸಾರಿಗೆ ತಲಾ 1, ಲೋಕೋಪಯೋಗಿ ಇಲಾಖೆ 3, ಸಿಡಿಪಿಒ 4, ಎಡಿಎಲ್‌ಆರ್ 3, ಕಂದಾಯ 9, ಆರ್‌ಪಿಡಿಆರ್(ಟಿಪಿ) 24 ಸೇರಿದಂತೆ 66 ಅರ್ಜಿಗಳು ಸ್ವೀಕೃತಗೊಂಡಿದ್ದು, ಹಂತ ಹಂತದಲ್ಲಿ ಅರ್ಜಿಗಳ ವಿಲೇವಾರಿ ಮಾಡಲಾಗುವುದು ಎಂದರು. ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಆರ್. ಕೆ.ಶ್ರೀಕುಮಾರ ಮಾತನಾಡಿ, ಸರ್ಕಾರದ ಯೋಜನೆಗಳ ಬಗ್ಗೆ ಜನರಲ್ಲಿ ಮನಮುಟ್ಟುವಂತಹ ಕೆಲಸ ಮಾಡಲಾಗುತ್ತಿದೆ. ಪ್ರಚಾರದ ಮೂಲಕ ಪ್ರತಿಯೊಂದು ಯೋಜನೆಗಳ ಜಾಗೃತಿ ಮೂಡಿಸಲಾಗುವುದು. ಉತ್ತಮವಾಗಿ ಸೇವೆಯನ್ನು ಕೊಡೋಣ. ಪ್ರತಿ ಶನಿವಾರ ಗ್ರಾಪಂ ಮತ್ತು ವಾರ್ಡ್‌ಗಳಲ್ಲಿ ಜಾಗೃತಿ ಮೂಡಿಸುವ ಜೊತೆಗೆ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹರಿಸಲಾಗುವುದು ಎಂದರು. ವಿವಿಧ ಸರಕಾರಿ ಯೋಜನೆಗಳ ಪ್ರಮಾಣ ಪತ್ರಗಳನ್ನು ವಿತರಿಸಿದರು.

ತದನಂತರ ಜನರ ಸಮಸ್ಯೆಗಳನ್ನು ಆಲಿಸಲು ತೆರೆದಿದ್ದ ಕೌಂಟರ್‌ಗಳಿಗೆ ತಹಶೀಲ್ದಾರ್ ಜೂಗಲ್ ಮಂಜುನಾಯಕ ನೇತೃತ್ವದಲ್ಲಿ ಅಧಿಕಾರಿಗಳು ಭೇಟಿ ನೀಡಿ, ಪರಿಶೀಲಿಸಿ, ಅರ್ಜಿಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕೆಲಸವಾಗಬೇಕೆಂದು ಸೂಚಿಸಿದರು. ತದನಂತರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ, ಶಿಕ್ಷಣ ಸೇರಿದಂತೆ ವಿವಿಧ ಇಲಾಖೆಗಳ ವಸ್ತು ಪ್ರದರ್ಶವನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಎಡಿ ಮಲ್ಲನಗೌಡ ಕೆ.ಎಸ್, ನೀರಾವರಿ ಇಲಾಖೆಯ ಎಇಇ ಶ್ರೀನಿವಾಸ, ಪಶುಸಂಗೋಪಾನ ಅಧಿಕಾರಿ ಬಸವರಾಜ, ತಾಲೂಕು ಆರೋಗ್ಯ ಅಧಿಕಾರಿ ಡಾ.ಅನೀಲ್ ಕುಮಾರ, ಮುಖ್ಯಾಧಿಕಾರಿ ಬಿ.ಮಲ್ಲಿಕಾರ್ಜುನ, ಭೂಮಾಪನ ಇಲಾಖೆಯ ಎಡಿಎಲ್ ಆರ್ ನರಸಪ್ಪ, ಎಸಿಡಿಪಿಒ ಮೋಹನ್ ಕಳಸಾಪುರ ಸೇರಿದಂತೆ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಸಾರ್ವಜನಿಕರು ಇದ್ದರು.

## ನೇಮಕಾತಿ ಪ್ರಕಟಣೆ

**KPSC ನೇಮಕಾತಿ 2026–319 ಏಂಖ ಗ್ರೂಪ್ A ಮತ್ತು B ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಆಗಸ್ಟ್ 31, 2026**

KPSC ನೇಮಕಾತಿ 2026: KPSCAiAAA 2026–27ನೇ ಸಾಲಿನ 319 ಗ್ರೂಪ್–A ಮತ್ತು B ಗೆಜೆಟೆಡ್ ಪ್ರೊಬೇಷನರ್ ಹುದ್ದೆಗಳ ಅಧಿಸೂಚನೆಯನ್ನು ಪ್ರಕಟಿಸಿದೆ. ಕರ್ನಾಟಕ ಲೋಕಸೇವಾ ಆಯೋಗವು (KPSC) ಆಗಸ್ಟ್ 2026ರ ಅಧಿಕೃತ ಅಧಿಸೂಚನೆಯ ಮೂಲಕ 319 KAS ಗ್ರೂಪ್–A ಮತ್ತು B ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 31–ಆಗಸ್ಟ್–2026 ರೊಳಗೆ (ಅಂತಿಮ ದಿನಾಂಕವನ್ನು 07–ಸೆಪ್ಟೆಂಬರ್–2026 ರವರೆಗೆ ವಿಸ್ತರಿಸಲಾಗಿದೆ) ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.
ಅಧಿಕೃತ ವೆಬ್‌ಸೈಟ್: kpsc.kar.nic.in

## ಸರ್ಕಾರಿ ಶಾಲೆ ಮಕ್ಕಳಿಗೆ ಉಚಿತ ಸ್ಕೂಲ್ ಬ್ಯಾಗ್, ಪರೀಕ್ಷಾ ಪ್ಯಾಡ್, ನೋಟ್ ಬುಕ್, ಪೆನ್ನುಗಳ ವಿತರಣೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕಿನ ಗೋಮರ್ಸಿ ಗ್ರಾಮದ ಉರ್ದು ಸರ್ಕಾರಿ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಎಸ್.ನರೇಶ ರಮಾ ಕ್ಯಾಂಪ್ ಇವರಿಂದ ಸ್ಕೂಲ್ ಬ್ಯಾಗ್, ಪೆನ್ನು ಗಳು, ಪರೀಕ್ಷಾ ಪ್ಯಾಡ್ ಮತ್ತು ನೋಟ್ ಬುಕ್ ಗಳನ್ನು ಉಚಿತವಾಗಿ ಅಕ್ಷಯ ಆಹಾರ ಜೋಳಿಗೆ ಸೇವಾ ಟ್ರಸ್ಟ್ ಹಾಗೂ ವನಸಿರಿ ಫೌಂಡೇಶನ್ ಸಹಯೋಗದಲ್ಲಿ ವಿತರಿಸಲಾಯಿತು.**



ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಕ್ಷಯ ಆಹಾರ ಜೋಳಿಗೆ ಸೇವಾ ಟ್ರಸ್ಟ್ ಸಂಸ್ಥಾಪಕ ಕಾರ್ಯದರ್ಶಿ ಅಶೋಕ ನಲ್ಲಾ ಮಾತನಾಡಿ, ಶಿಕ್ಷಕರ ದಿನಾಚರಣೆ ವಿಶೇಷವಾಗಿ ಆಚರಿಸುವ ಉದ್ದೇಶದಿಂದ ಮಕ್ಕಳಿಗೆ ಶಿಕ್ಷಕರರಿಂದ ಮಕ್ಕಳಿಗೆ ಅವಶ್ಯಕ ಇರುವ ಕಲಿಕೋಪಕರಣ ವಿತರಿಸುವ ಕಾರ್ಯ ಮಾಡಿದ್ದೇವೆ. ಶಿಕ್ಷಕರ ದಿನಾಚರಣೆ ಶಿಕ್ಷಕರನ್ನು ಗೌರವಿಸುವ ಕಾರ್ಯ ದೇಶದ ಪ್ರತಿಯೊಬ್ಬ ಮಾಡಬೇಕು ಶಿಕ್ಷಕರು ರಾಷ್ಟ್ರ ನಿರ್ಮಾಣದ ಶಿಲ್ಪಿಗಳು ಮಕ್ಕಳು ಚೆನ್ನಾಗಿ ಓದಿ ದೇಶಕ್ಕೆ ಕೊಡುಗೆ ನೀಡಬೇಕೆಂದರು. ಈ ಸಮಯದಲ್ಲಿ ವನಸಿರಿ ಫೌಂಡೇಶನ್ ಸಂಸ್ಥಾಪಕ ಅಮರೇಗೌಡ ಮಲ್ಲಾಪುರ, ಪುನೀತ್ ಆಶ್ರಮದ ಪಂಪಯ್ಯಸ್ವಾಮಿ, ಮಹಿಳಾ ಮುಖಂಡರಾದ ದಾಕ್ಷಾಯಿಣಿ ಮಾಲೀಪಾಟೀಲ್, ಕೆ.ನಿರುಪಾದಿ ಗೋಮರ್ಸಿ, ಕೆ.ಆರ್.ಎಸ್ ಪಕ್ಷದ ಮುಖಂಡರು, ಶಿಕ್ಷಣ ಇಲಾಖೆಯ ಅಧಿಕಾರಿಗಳು, ಮುಖ್ಯಗುರುಗಳು, ಶಾಲಾ ಶಿಕ್ಷಕರು, ಮಕ್ಕಳಿದ್ದರು.

## ಕುಂಭಕರ್ಣನ ನಿದ್ದೆಯಲ್ಲಿರುವ ಸರ್ಕಾರವನ್ನು ಬಿಜೆಪಿ ಬಡಿದೆಬ್ಬಿಸುತ್ತಿದೆ: ವಿಜಯೇಂದ್ರ

ನೈಜ್ಯ ದೆಸೆ ನ್ಯೂಸ್

**ಕಾರಟಗಿ (ಕೊಪ್ಪಳ ಜಿಲ್ಲೆ): ಕುಂಭಕರ್ಣನ ನಿದ್ದೆಯಲ್ಲಿರುವ ರಾಜ್ಯ ಸರ್ಕಾರ ಮತ್ತು ಮುಖ್ಯಮಂತ್ರಿ ಅವರನ್ನು ಬಿಜೆಪಿ ಬಡಿದೆಬ್ಬಿಸುವ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಟೀಕಿಸಿದರು.**



ಬಳ್ಳಾರಿ ಚಲೋ ಪಾದಯಾತ್ರೆಯ ಐದನೇ ದಿನವಾದ ಇಂದು ಕಾರಟಗಿಯ ಎಪಿಎಂಸಿ ಯಾರ್ಡ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ನೆಪದಲ್ಲಿ ಗಾಳಿಯಲ್ಲಿ ಗೋಪುರ ಕಟ್ಟುತ್ತಿದೆ. ಇದನ್ನು ಹೊರತುಪಡಿಸಿ ರಾಜ್ಯದಲ್ಲಿ ಬೇರೆ ಯಾವುದೇ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿಲ್ಲ ಎಂದು ಆರೋಪಿಸಿದರು. ಕಳೆದ ಮೂರು ವರ್ಷಗಳಿಂದ ಗ್ಯಾರಂಟಿ ಯೋಜನೆಗಳ ಬಗ್ಗೆ ಸರ್ಕಾರ ಭಾರಿ ಪ್ರಚಾರ ನಡೆಸಿದೆ. ಇದು ಜನಪ್ರಿಯ ಸರ್ಕಾರವಲ್ಲ, 'ಜಾಹೀರಾತು ಸರ್ಕಾರ' ಎಂದು ತಾನು ಈ ಹಿಂದೆಯೇ ಹೇಳಿದ್ದೆ ಎಂದು ವ್ಯಂಗ್ಯವಾಡಿದರು. ಮುಂದಿನ ಚುನಾವಣೆಯಲ್ಲೂ ತಮ್ಮದೇ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂಬ ಭ್ರಮೆಯಲ್ಲಿ ಕಾಂಗ್ರೆಸ್ ಇದೆ. ಆದರೆ ಎಲ್ಲ ವರ್ಗದ ಜನರಿಗೆ ಸರ್ಕಾರ ಅನ್ಯಾಯ ಮಾಡಿದೆ. ಆಡಳಿತ ಪಕ್ಷದ ಶಾಸಕರೇ ತಮ್ಮ ಸರ್ಕಾರ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಹೇಳುತ್ತಿದ್ದಾರೆ. ಇನ್ನಾದರೂ ಸರ್ಕಾರ ಎಚ್ಚೆತ್ತು ಬಡವರು ಮತ್ತು ರೈತರ ಬಗ್ಗೆ ಕಾಳಜಿ ವಹಿಸಬೇಕು ಎಂದರು. ಅರ್ಹ ಫಲಾನುಭವಿಗಳಿಗೆ ಗೃಹಲಕ್ಷ್ಮಿ ಯೋಜನೆಯ ಹಣ ತಲುಪದಿದ್ದರೆ ಇದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದ ವಿಜಯೇಂದ್ರ, ಶಕ್ತಿ ಯೋಜನೆಗೆ ಸರ್ಕಾರ ಭಾರಿ ಪ್ರಚಾರ ನೀಡುತ್ತಿದೆ. ಆದರೆ ಗ್ರಾಮೀಣ ಪ್ರದೇಶಗಳಲ್ಲಿ ಸಾಕಷ್ಟು ಬಸ್‌ಗಳೇ ಇಲ್ಲ. ಇದರಿಂದ ಶಾಲಾ–ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಹೇಳಿದರು. ಹಿಂದೆ ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಶಾಲಾ ಮಕ್ಕಳಿಗೆ ಸೈಕಲ್‌ಗಳನ್ನು ನೀಡಲಾಗಿತ್ತು. ಕಾಂಗ್ರೆಸ್ ಸರ್ಕಾರ ಆ ಯೋಜನೆಗೂ ಕನ್ನ ಹಾಕಿದೆ ಎಂದು ಆರೋಪಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಅಹವಾಲು ನಿಮ್ಮದು, ಪರಿಹಾರ ನಮ್ಮದು. ಮೈಸೂರಿನ ಪ್ರಜಾ ಸೇವ ಕಾರ್ಯಕ್ರಮದಲ್ಲಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಸ್ ಯತೀಂದ್ರ ಸಿದ್ದರಾಮಯ್ಯ

ನೈಜ್ಯ ದೆಸೆ ನ್ಯೂಸ್



**ತಾಂಡವಪುರ ಸೆಪ್ಟೆಂಬರ್ 5 ಸರ್ಕಾರದ ಸೇವೆಗಳು ಜನರ ಮನೆಬಾಗಿಲಿಗೆ ತಲುಪಿಸುವ ಉದ್ದೇಶದಿಂದ ಆರಂಭಗೊಂಡಿರುವ 'ಪ್ರಜಾಸೇವೆ' ಅಭಿಯಾನಕ್ಕೆ ಇಂದು ಮೈಸೂರು ಜಿಲ್ಲೆಯ ಹುಣಸೂರಿನ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಬಿ.ಆರ್. ಅಂಬೇಡ್ಕರ್ ಸಮುದಾಯ ಭವನದಲ್ಲಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ನಗರ ಸಚವರು ಆದ ಡಾಕ್ಟರ್ ಎಸ್ ಯತೀಂದ್ರ ಸಿದ್ರಾಮಯ್ಯನವರು ಉದ್ಘಾಟಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು**

ಇದೇ ವೇಳೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಾರ್ವಜನಿಕರು ತಮ್ಮ ಸಮಸ್ಯೆಗಳನ್ನು ಸಚಿವರು ಮತ್ತು ಶಾಸಕರ ಗಮನಕ್ಕೆ ತಂದು ಮನವಿ ಸಲ್ಲಿಸಿದರು ಮನವಿ ಸ್ವೀಕರಿಸಿ ಮಾತನಾಡಿದ ಸಚಿವ ಡಾಕ್ಟರ್ ಎಸ್ ಯತೀಂದ್ರ ಸಿದ್ರಾಮಯ್ಯನವರು ಸರ್ಕಾರ ಸಾರ್ವಜನಿಕರಿಗೋಸ್ಕರ ಪ್ರಜಾ ಸೇವಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಅಧಿಕಾರಿಗಳೇ ನಿಮ್ಮ ಮನೆ ಬಾಗಿಲಿಗೆ ಬಂದು ನಿಮ್ಮ ಸಮಸ್ಯೆಗಳನ್ನು ಕೇಳಿ ಸರಿಪಡಿಸಿ ಬಗೆಹರಿಸುವ ಹಾಗೂ ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸುವಂತಹ ಕಾರ್ಯಕ್ರಮ ಇದಾಗಿದ್ದು ಈ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಪಾಲ್ಗೊಂಡು ಇದರ ಪ್ರಯೋಜನವನ್ನು ಪಡೆದುಕೊಳ್ಳಿ ಎಂದು ತಿಳಿಸಿದರು ಈ ಸಂದರ್ಭದಲ್ಲಿ ಸಂದರ್ಭದಲ್ಲಿ ಸಾರ್ವಜನಿಕರಿಂದ ನೇರವಾಗಿ ಅಹವಾಲುಗಳನ್ನು ಸ್ವೀಕರಿಸಿ, ತ್ವರಿತವಾಗಿ ಸೂಕ್ತ ಪರಿಹಾರ ಕಲ್ಪಿಸುವಂತೆ ಅಧಿಕಾರಿಗಳಿಗೆ ಇದೇ ಸಂದರ್ಭದಲ್ಲಿ ಕಡಕ್ ಸೂಚನೆ ನೀಡಿದರು ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ಪರಿಕಲ್ಪನೆಯಾದ ಈ ಕಾರ್ಯಕ್ರಮವು ನಮ್ಮ ಸರ್ಕಾರದ ಜನಪರ ನಿಲುವಿಗೆ ನೇರ ಸಾಕ್ಷಿ. ರಾಜ್ಯಾದ್ಯಂತ ಆರಂಭಗೊಂಡಿರುವ ಈ ಅಭಿಯಾನವು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಸರ್ಕಾರದ ಬದ್ಧತೆಯ ಪ್ರತೀಕವಾಗಿದೆ. ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರ ನಡೆಯಲಿರುವ 'ಪ್ರಜಾಸೇವೆ'ಯಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಕುಂದುಕೊರತೆಗಳಿಗೆ ಪರಿಹಾರ ಕಂಡುಕೊಳ್ಳುವಂತೆ ಮನವಿ ಮಾಡುತ್ತೇನೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವುದು ನಮ್ಮ ಕರ್ತವ್ಯ; ಪರಿಹಾರ ನೀಡುವುದು ನಮ್ಮ ಬದ್ಧತೆ. ಈ ಸಂದರ್ಭದಲ್ಲಿ ಹುಣಸೂರು ಶಾಸಕರಾದ ಜಿ.ಡಿ. ಹರೀಶ್ ಗೌಡ, ಜಿಲ್ಲಾ ಪಂಚಾಯತ್ ಸಿಇಓ ಯುಕೇಶ್ ಕುಮಾರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಮಾಜಿ ಶಾಸಕರಾದ ಶ್ರೀ ಹೆಚ್.ಪಿ. ಮಂಜುನಾಥ್, ಅಪರ ಜಿಲ್ಲಾಧಿಕಾರಿ ಶ್ರೀಮತಿ ಐಶ್ವರ್ಯ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷೆ ಶ್ರೀಮತಿ ಪುಷ್ಪಾ ಅಮರನಾಥ್, ಡಿಸಿಎಫ್ ಸೀಮಾ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಹಿರಿಯ ಅಧಿಕಾರಿಗಳು ಹಾಗೂ ಮುಖಂಡರು ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು

## ಸಹಕಾರ ಸಂಘಗಳ ಬಲವರ್ಧನೆಗೆ ಗುಣಮಟ್ಟದ ಆಡಳಿತ ಅಗತ್ಯ ಕುಷ್ಟಗಿಯಲ್ಲಿ ಸೌಹಾರ್ದ?ಸಹಕಾರ ಸಂಘಗಳ ಕಾರ್ಯಾಗಾರ ಸಂವಾದ

ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: ಸಹಕಾರ ಸಂಘಗಳ ಅಭಿವೃದ್ಧಿ ಹಾಗೂ ಸದಸ್ಯರ ಸಬಲೀಕರಣದ ಜೊತೆಗೆ ಸಂಘಗಳ ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ರೂಪಿಸುವ ಅಗತ್ಯವಿದೆ ಎಂದು ಅಮರಯ್ಯ ಸಾಲಿಮಠ ಹೇಳಿದರು.**

ನಗರದ ಶ್ರೀ ಸಪ್ತಗಿರಿ ಸೌಹಾರ್ದ ಪತ್ತಿನ ಸಹಕಾರಿ ಸಂಘ ನಿಯಮಿತದಲ್ಲಿ ಕುಷ್ಟಗಿ ತಾಲೂಕಿನ ಸಹಕಾರಿಗಳ ಸಹಯೋಗದಲ್ಲಿ ಆಯೋಜಿಸಿದ್ದ ಸೌಹಾರ್ದ ಮತ್ತು ಸಹಕಾರ ಸಂಘಗಳ ಕಾರ್ಯಾಗಾರ?ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವಾರ್ಷಿಕ ಸಾಮಾನ್ಯ ಸಭೆ ಸಂಘದ ಆಡಳಿತದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಸಭೆಯ ನೋಟೀಸ್‌ನ್ನು ನಿಯಮಾನುಸಾರ ಹಾಗೂ ಸಮರ್ಪಕವಾಗಿ ಸಿದ್ಧಪಡಿಸುವುದು, ಸಭೆಯಲ್ಲಿ ಕೈಗೊಂಡ ನಿರ್ಣಯಗಳನ್ನು ನಿಖರವಾಗಿ ದಾಖಲಿಸುವುದು ಹಾಗೂ ಸಭಾ ನಡಾವಳಿಗಳನ್ನು ವ್ಯವಸ್ಥಿತವಾಗಿ ನಿರ್ವಹಿಸುವುದು ಸಂಘದ ಪಾರದರ್ಶಕ ಆಡಳಿತಕ್ಕೆ ಅವಶ್ಯಕವಾಗಿದೆ ಎಂದು ತಿಳಿಸಿದರು.

ಸಹಕಾರ ಸಂಘಗಳು ಕೇವಲ ಆರ್ಥಿಕ ಚಟುವಟಿಕೆಗಳಿಗೆ ಸೀಮಿತವಾಗದೆ, ಸದಸ್ಯರ ಹಿತಾಸಕ್ತಿ ಹಾಗೂ ಸಬಲೀಕರಣಕ್ಕೆ ಆದ್ಯತೆ ನೀಡಬೇಕು. ಸಂಘಗಳ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ, ಜವಾಬ್ದಾರಿತನ ಮತ್ತು ನಿಯಮಾನುಸರಣೆಗೆ ಹೆಚ್ಚಿನ ಒತ್ತು ನೀಡಿದಾಗ ಸಹಕಾರ ಕ್ಷೇತ್ರ ಮತ್ತಷ್ಟು ಬಲಿಷ್ಠವಾಗಲಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಿ.ಕೆ. ಪಾಟೀಲ ವಹಿಸಿದ್ದರು. ಮಹಾಲಿಂಗಪ್ಪ ದೋಟಿಹಾಳ ಅತಿಥಿಗಳಾಗಿ, ಅಮರಯ್ಯ ಸಾಲಿಮಠ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಶಶಿಧರ್ ಶೆಟ್ಟರ್ ಪ್ರಾಸ್ತಾವಿಕ ನುಡಿಗಳನ್ನಾಡಿದರು.



ಶೋಭಾ ಟಿ. ಬಳೂಟಗಿ, ಮುಖ್ಯ ಕಾರ್ಯನಿರ್ವಾಹಕರು, ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಮಹಮ್ಮದ್ ರಫಿ ಎಚ್. ಅಂಗಡಿ ಸ್ವಾಗತಿಸಿದರು. ಶರಣು ವೈ. ಮಾಲಿಪಾಟೀಲ ನಿರೂಪಿಸಿದರು. ಶರಣು ಬಿ. ನಾಲತವಾಡ ವಂದನಾರ್ಪಣೆ ಸಲ್ಲಿಸಿದರು. ತಾಲೂಕಿನ ವಿವಿಧ ಸೌಹಾರ್ದ ಹಾಗೂ ಸಹಕಾರ ಸಂಘಗಳ ಪದಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕರು, ಸಿಬ್ಬಂದಿ ಹಾಗೂ ಸಹಕಾರಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

## ಮಾನ್ವಿ ಪಟ್ಟಣದ ರಸ್ತೆ ಅವ್ಯವಸ್ಥೆ ಸರಿಪಡಿಸಲು ಕನ್ನಡಸೇನೆ ಆಗ್ರಹ

ನೈಜ್ಯ ದೆಸೆ ನ್ಯೂಸ್

**ಮಾನ್ವಿ : ಪಟ್ಟಣದ ವಿವಿಧೆಡೆ ರಸ್ತೆ ಹಾಗೂ ಚರಂಡಿ ಕಾಮಗಾರಿಗಳನ್ನು ಅರ್ಧಕ್ಕೆ ನಿಲ್ಲಿಸಲಾಗಿದ್ದು, ಚರಂಡಿ ನಿರ್ಮಾಣದಲ್ಲಿಯೂ ಲೋಪಗಳು ಕಂಡುಬರುತ್ತಿವೆ. ಇದರಿಂದ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ. ಕೂಡಲೇ ಸ್ಥಳ ಪರಿಶೀಲನೆ ನಡೆಸಿ, ಕಳಪೆ ಹಾಗೂ ಅವೈಜ್ಞಾನಿಕ ಕಾಮಗಾರಿಗಳನ್ನು ಸರಿಪಡಿಸಿ, ಅಪೂರ್ಣ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಕನ್ನಡಸೇನೆ ಕರ್ನಾಟಕದ ಪ್ರಧಾನ ಕಾರ್ಯದರ್ಶಿ ಶಿವಾನಂದ ನಾಯಕ ಒತ್ತಾಯಿಸಿದರು.**



ಪಟ್ಟಣದ ಬಾಶುಮಿಯ ಸಾಹುಕಾರ್ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ನಡೆದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ?2 ಕಾರ್ಯಕ್ರಮದಲ್ಲಿ ಮಾನ್ವಿ ಪಟ್ಟಣದ ವಿವಿಧ ಮೂಲಭೂತ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹಿಸಿ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯ್ ಧರ್ಮಸಿಂಗ್ ಅವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ಸಾಥ್ ಮಹಲ್ ಸರ್ಕಲ್‌ನಿಂದ ಸಿಂಧನೂರುವರೆಗೆ ನಡೆಯುತ್ತಿರುವ ಚತುಷ್ಪಥ ರಸ್ತೆ ಕಾಮಗಾರಿ ಹಲವು ಕಡೆಗಳಲ್ಲಿ ಅವೈಜ್ಞಾನಿಕವಾಗಿ ನಡೆಯುತ್ತಿದ್ದು, ಕಾಮಗಾರಿಯ ಗುಣಮಟ್ಟದ ಬಗ್ಗೆ ಸಾರ್ವಜನಿಕರಲ್ಲಿ ಅಸಮಾಧಾನ ವ್ಯಕ್ತವಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕಾಮಗಾರಿಯ ಸ್ಥಳ ಪರಿಶೀಲನೆ ನಡೆಸಿ, ಲೋಪದೋಷಗಳನ್ನು ಸರಿಪಡಿಸುವಂತೆ ಗುತ್ತಿಗೆದಾರರಿಗೆ ಸೂಕ್ತ ನಿರ್ದೇಶನ ನೀಡಬೇಕು ಎಂದು ಅವರು ಒತ್ತಾಯಿಸಿದರು.

ಕರಡಿಗುಡ್ಡ ಸರ್ಕಲ್ (ವಾಲ್ಮೀಕಿ ಸರ್ಕಲ್) ಬಳಿ ರಸ್ತೆ ಕಾಮಗಾರಿಯಿಂದಾಗಿ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಅಪಘಾತಗಳ ಸಂಖ್ಯೆಯೂ ಹೆಚ್ಚಾಗಿದೆ. ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ಕರಡಿಗುಡ್ಡ ಸರ್ಕಲ್ ಹಾಗೂ ಬಸವ ವೃತ್ತದ ಬಳಿ ಟ್ರಾಫಿಕ್ ಸಿಗ್ನಲ್ ಅಳವಡಿಸಬೇಕು ಎಂದು ಆಗ್ರಹಿಸಿದರು.

ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಪಾದಚಾರಿಗಳಿಗೆ ಸಮರ್ಪಕ ಫುಟ್‌ಪಾತ್ ವ್ಯವಸ್ಥೆ ಇಲ್ಲದಿರುವುದರಿಂದ ಸಾರ್ವಜನಿಕರು ರಸ್ತೆಯ ಮೇಲೆಯೇ ಸಂಚರಿಸುವಂತಾಗಿದೆ. ಕೆಲ ವ್ಯಾಪಾರಿಗಳು ಹಾಗೂ ಆನ್‌ಲೈನ್ ಶಾಪ್‌ಗಳವರು ಫುಟ್‌ಪಾತ್‌ಗಳನ್ನು ಅತಿಕ್ರಮಿಸಿಕೊಂಡಿರುವುದರಿಂದ ಪಾದಚಾರಿಗಳು ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿದೆ. ಕೂಡಲೇ ಫುಟ್‌ಪಾತ್ ಮೇಲಿನ ಅತಿಕ್ರಮಣ ತೆರವುಗೊಳಿಸಿ, ಪಾದಚಾರಿಗಳಿಗೆ ಸುರಕ್ಷಿತವಾಗಿ ಸಂಚರಿಸಲು ಅವಕಾಶ ಕಲ್ಪಿಸಬೇಕು ಎಂದು ಹೇಳಿದರು.

ವಾಲ್ಮೀಕಿ ಸರ್ಕಲ್‌ನಿಂದ ಸಂಗಾಪುರ ಹಾಗೂ ಕರಡಿಗುಡ್ಡ ಕಡೆಗೆ ತೆರಳುವ ರಸ್ತೆಯ ಕಾಮಗಾರಿ ಅರ್ಧಕ್ಕೆ ನಿಂತಿರುವುದರಿಂದ ಮಳೆ ಬಂದಾಗ ರಸ್ತೆಯಲ್ಲಿ ತೆಗ್ಗು?ದಿಮ್ಮುಗಳು ಉಂಟಾಗಿ ಸಾರ್ವಜನಿಕರು ಹಾಗೂ ವಾಹನ ಸವಾರರು ಪರದಾಡುವಂತಾಗಿದೆ. ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಕ್ತ ನಿರ್ದೇಶನ ನೀಡಿ, ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ಶಿವಾನಂದ ನಾಯಕ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ನಗರ ಘಟಕದ ಅಧ್ಯಕ್ಷ ಶೇಖ್ ಮುಸ್ತಫಾ, ತಾಲೂಕು ಉಪಾಧ್ಯಕ್ಷ ಸುದರ್ಶನ ಪೂಜಾರಿ, ಸಹ ಕಾರ್ಯದರ್ಶಿ ಆಜಾರುದ್ದಿನ್, ನಗರ ಘಟಕದ ಉಪಾಧ್ಯಕ್ಷ ಶಬ್ಬೀರ್ ಸೇರಿದಂತೆ ಕನ್ನಡಸೇನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮಾನ್ವಿಯ ಪ್ರಜಾಸೇವೆ ಆಂದೋಲನ ಕಾರ್ಯಕ್ರಮದಲ್ಲಿ ಗಮನ ಸೆಳೆದ ವಿವಿಧ ಮಳಿಗೆಗಳು ಜಿಲ್ಲಾ ಉಸ್ತುವಾರಿ ಸಚಿವ ಡಾ.ಅಜಯ್ ಧರ್ಮಸಿಂಗ್ ಅವರಿಂದ ಚಾಲನೆ

ನೈಜ್ಯ ದೆಸೆ ನ್ಯೂಸ್



**ರಾಯಚೂರು ಸೆಪ್ಟಂಬರ್ 05 (ಕರ್ನಾಟಕ ವಾರ್ತೆ): ಜಿಲ್ಲೆಯ ಮಾನ್ವಿ ಪಟ್ಟಣದ ಭಾಷುಮಿಯ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ರಾಯಚೂರು ಇವರ ವತಿಯಿಂದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ–2026ರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯ ಮಳಿಗೆಗಳು ಸಾರ್ವಜನಿಕರ ಗಮನ ಸೆಳೆದವು.**

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್, ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು, ಮಾನ್ವಿ ಶಾಸಕ ಹಂಪಯ್ಯ ನಾಯಕ ಹಾಗೂ ಜಿಲ್ಲಾಧಿಕಾರಿ ಪೂವಿತಾ ಎಸ್ ಸೇರಿದಂತೆ ವಿವಿಧ ಗಣ್ಯರು ಮಳಿಗೆಗಳಿಗೆ ಚಾಲನೆ ನೀಡಿ, ವೀಕ್ಷಣೆ ಮಾಡಿದರು.

ಗಮನ ಸೆಳೆದ ಮಳಿಗೆಗಳು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ 12 ಮಾರಕ ರೋಗಗಳಿಂದ ರಕ್ಷಣೆ, ಡೆಂಗ್ಯೂ , ಚಿಕುಂಗುನ್ಯಾ ಜ್ವರ ತಡೆ, ನಾಯಿ ಕಡಿತದಿಂದ ರೇಬಿಸ್, ವಾಂತಿ ಭೇಧಿ ಪ್ರಕರಣಗಳ, ಮಾನವಿ ಆರೋಗ್ಯ ಭಂಡಾರದ ವತಿಯಿಂದ ಆರೋಗ್ಯಕರ ಜೀವನಕ್ಕಾಗಿ ಆರೋಗ್ಯಕರ ಅನ್ನ, ರಾಯಚೂರು ತೋಟಗಾರಿಕೆ ಇಲಾಖೆಯ ರೈತರಿಗೆ ಸಿಗುವ ಪ್ರಮುಖ ಯೋಜನೆಗಳ ಕುರಿತು ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಬೇಟಿ ಬಚಾವೋ, ಬೇಟಿ ಪಡಾವೋ, ಹೆಣ್ಣು ಮಕ್ಕಳನ್ನು ರಕ್ಷಿಸೋಣ–ಹೆಣ್ಣುಮಕ್ಕಳನ್ನು ಓದಿಸೋಣ ಎಂಬ ಕಾರ್ಯಕ್ರಮ ಹಾಗೂ ಕೃಷಿ ಇಲಾಖೆಯಿಂದ ವಿವಿಧ ಕೃಷಿ ಉಪಕರಣಗಳು ವಿತರಿಸಿ, ವಿವಿಧ ಇಲಾಖೆಯ ಮಳಿಗೆಗಳ ಮೂಲಕ ಸಾರ್ವಜನಿರಿಗೆ ಜಾಗೃತಿ ಮೂಡಿಸಲಾಯಿತು.

ಪ್ರಜಾಸೇವೆಯಡಿ ಅರ್ಜಿ ಪಡೆಯಲು ವಿಶೇಷ ಕೌಂಟರ್: ಜಿಲ್ಲೆಯ ಮಾನ್ವಿ ಪಟ್ಟಣದ ಭಾಷುಮಿಯ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಸಭೆಯ ಅಂಗವಾಗಿ, ಸಾರ್ವಜನಿಕರಿಂದ ಅಹವಾಲು ಪಡೆಯಲು, ಅರ್ಜಿದಾರರಿಗೆ ಸ್ವೀಕೃತಿ ನೀಡುವ ಸಲುವಾಗಿ ವಿಶೇಷ ಕೌಂಟರ್‌ಗಳನ್ನು ಇಲಾಖಾವಾರು ತೆರೆದು ಸಾರ್ವಜನಿರಿಗೆ ಅನುಕೂಲ ಕಲ್ಪಿಸಿಕೊಡಲಾಗಿತ್ತು.

ಶಿಕ್ಷಕರ ದಿನಾಚರಣೆ ಅಂಗವಾಗಿ ಡಾ. ರಾಧಾಕೃಷ್ಣನ್ ಅವರಿಗೆ ಗೌರವ ಸಮರ್ಪಣೆ: ಭಾರತದ ಮೊದಲ ಉಪರಾಷ್ಟ್ರಪತಿ ಡಾ. ರಾಧಾಕೃಷ್ಣನ್ ಅವರ ಜನ್ಮ ದಿನವಾದ ಸೆಪ್ಟಂಬರ್ 05ರ ದಿನವನ್ನು ಶಿಕ್ಷಕರ ದಿನಾಚರಣೆಯಾಗಿ ಆಚರಿಸಲಾಗುತ್ತಿದ್ದು, ಇದರ ಅಂಗವಾಗಿ ಮಾನ್ವಿ ಪಟ್ಟಣದ ಭಾಷುಮಿಯ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಏರ್ಪಡಿಸಿದ ಪ್ರಜಾಸೇವಾ ಸಭೆಯ ಸಂದರ್ಭದಲ್ಲಿ ಡಾ. ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ವೇದಿಕೆಯಲ್ಲಿದ್ದ ಎಲ್ಲ ಗಣ್ಯಮಾನ್ಯರು ಪುಷ್ಪನಮನ ಸಲ್ಲಿಸಿ, ಗೌರವ ಸಮರ್ಪಿಸಿದರು.

ಸಚಿವರಿಗೆ ಅದ್ದೂರಿ ಸ್ವಾಗತ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ರಾಯಚೂರು ಇವರ ವತಿಯಿಂದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ –2026ರ ಕಾರ್ಯಕ್ರಮದಲ್ಲಿ ಭಾಗವಹಿಸಲು ಮಾನ್ವಿ ಪಟ್ಟಣಕ್ಕೆ ಆಗಮಿಸಿದ ಜಿಲ್ಲಾ ಉಸ್ತುವಾರಿ ಸಚಿವರಿಗೆ ಡೊಳ್ಳು ಸೇರಿದಂತೆ ವಿವಿಧ ವಾದ್ಯಗಳೊಂದಿಗೆ ಮಾನ್ವಿಯ ಮುಖ್ಯ ರಸ್ತೆಯಿಂದ ಮಾನ್ವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಸ್ಥಾಪಿಸಲಾಗಿದ್ದ ಮುಖ್ಯ ವೇದಿಕೆಗೆ ಸಚಿವರನ್ನು ಕರೆತರಲಾಯಿತು.

ಈ ವೇಳೆ ಎನ್.ಸಿ.ಸಿ ವಿದ್ಯಾರ್ಥಿಗಳಿಂದ ಶಿಸ್ತು ಬದ್ಧವಾಗಿ ಪಥ ಸಂಚಲನ ಮಾಡಿದರು. ಇದೇ ಸಂದರ್ಭದಲ್ಲಿ ಮಾನ್ವಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಗಪೂರ್‌ಸಾಬ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಿ.ಕೆ.ಅಮರೇಶ, ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎಸ್.ಎಸ್.ನಕುಲ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಷು ಗಿರಿ., ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಮಾನ್ವಿ ತಹಶಿಲ್ದಾರ್ ಭೀಮರಾಯ ರಾಮಸಮುದ್ರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ವಚನ ದರ್ಶನ

ಎನ್ನ ಕಾಯವ ದಂಡಿಗೆಯ ಮಾಡಯ್ಯ, ಎನ್ನ ಶಿರವ ಸೋರೆಯ ಮಾಡಯ್ಯ, ಎನ್ನ ನರವ ತಂತಿಯ ಮಾಡಯ್ಯ, ಎನ್ನ ಬೆರಳ ಕಡ್ಡಿಯ ಮಾಡಯ್ಯ, ಬತ್ತೀಸ ರಾಗವ ಪಾಡಯ್ಯ, ಉರದಲೊತ್ತಿ ಬಾರಿಸು, ಕೂಡಲಸಂಗಮದೇವಾ.

"ಎನ್ನ ಕಾಯವ ದಂಡಿಗೆಯ ಮಾಡಯ್ಯ" ಎನ್ನುವುದು 12ನೇ ಶತಮಾನದ ಸಾಮಾಜಿಕ ಕ್ರಾಂತಿಕಾರಿ ಮತ್ತು ಮಹಾನ್ ಶಿವಶರಣರಾದ ವಿಶ್ವಗುರು ಬಸವಣ್ಣನವರು ಬರೆದ ಅತ್ಯಂತ ಪ್ರಸಿದ್ಧ ಹಾಗೂ ಜನಪ್ರಿಯ ವಚನವಾಗಿದೆ. ಈ ವಚನದಲ್ಲಿ ಬಸವಣ್ಣನವರು ತಮ್ಮ ಇಡೀ ದೇಹ ಮತ್ತು ಜೀವವನ್ನು ಭಗವಂತನ ಸೇವೆಗೆ ಹಾಗೂ ಭಕ್ತಿಯ ಸಂಗೀತಕ್ಕೆ ಸಂಪೂರ್ಣವಾಗಿ ಸಮರ್ಪಿಸುವ ಹಂಬಲವನ್ನು ವ್ಯಕ್ತಪಡಿಸಿದ್ದಾರೆ.

'ನಾದಪ್ರಿಯನೂ ಅಲ್ಲ, ವೇದಪ್ರಿಯನೂ ಅಲ್ಲ, ಭಕ್ತಿಪ್ರಿಯ ನಮ್ಮ ಕೂಡಲಸಂಗಮ ದೇವ.' ಎಂದು ಇನ್ನೊಂದು ವಚನದಲ್ಲಿ ಹೇಳಿದ ಬಸವಣ್ಣನವರು ಈ ವಚನದಲ್ಲಿ 'ಬತ್ತೀಸರಾಗವ ಹಾಡು' ಎಂದು ದೇವರನ್ನು ಕೇಳಿಕೊಳ್ಳುತ್ತಿದ್ದಾರೆ. ನಾದ ಬಿಂದು ಕಳಾತೀತನಾದ ದೇವರು ನಾದಪ್ರಿಯನಲ್ಲವಾದ್ದರಿಂದ ನಾವು ಅವನನ್ನು ಹಾಡಿನ ಮೂಲಕ ಸಂಪ್ರೀತಗೊಳಿಸಲಾರೆವು. ಆದರೆ ದೇವರು ಭಕ್ತನ ದೇಹವನ್ನೇ ತಂತೀವಾದ್ಯ ವಾಗಿಸಿಕೊಂಡು ಸ್ವತಃ 32 ರಾಗಗಳನ್ನು ಹಾಡಬಯಸುತ್ತಾನೆ ಎಂದು ಸೂಚಿಸುತ್ತಾರೆ. ಭಕ್ತನಾದವನು ಕಾಯಕಪ್ರಜ್ಞೆ, ಪ್ರಸಾದನಿಷ್ಠೆ, ದಾಸೋಹಭಾವ, ಅರಿವು, ಆಚಾರ, ವ್ರತ, ನೇಮ, ಶೀಲ, ಅಂತರಂಗಶುದ್ಧಿ ಮತ್ತು ಬಹಿರಂಗ ಶುದ್ಧಿಯಿಂದ ತನ್ನ ಅಂಗಾಂಗ ಗಳನ್ನೆಲ್ಲ ಭಕ್ತಿನಾದ ಹೊರಡಿಸುವ ತಂತೀವಾದ್ಯವಾಗಿಸಲು ಸಿದ್ಧಗೊಳಿಸಬೇಕು. ಭಕ್ತನ ಕಾಯವು ಪರಮಾತ್ಮನ ತಂತೀವಾದ್ಯದ ದಂಡವಾಗುವ ಯೋಗ್ಯತೆ ಹೊಂದಬೇಕು. ಶಿರವು ತಂತೀವಾದ್ಯದ ತುದಿಗೆ ಅಳವಡಿಸುವ ಸೋರೆಯ ಬುರುಡೆಯಾಗಬೇಕು. ನಮ್ಮ ನರನಾಡಿಗಳೆಲ್ಲ ಭಕ್ತಿನಾದ ಹೊರಡಿಸುವ ತಂತಿಗಳಾಗಬೇಕು. ಬೆರಳುಗಳು ತಂತಿಯನ್ನು ಬಿಗಿಗೊಳಿಸಲು ಅಳವಡಿಸಿದ ಕೀಲಿನಂಥ ಸಾಧನಗಳಾದ ಬಿರಡೆಗಳಾಗಬೇಕು. ಹೀಗೆ "ನನ್ನ ದೇಹವನ್ನು ತಂತೀವಾದ್ಯವಾಗಿಸಿ ದಯಾಮೂಲವಾದ ಎದೆಯಲ್ಲಿ ಒತ್ತಿ ಬಾರಿಸುತ್ತ 32 ರಾಗಗಳನ್ನು ಹಾಡು" ಎಂದು ಬಸವಣ್ಣನವರು ಕೂಡಲಸಂಗಮದೇವರಲ್ಲಿ ಬಿನ್ನವಿಸಿಕೊಳ್ಳುತ್ತಿದ್ದಾರೆ. ಭಕ್ತನ ಅಂಗಾಂಗಗಳೆಲ್ಲ ಭಕ್ತಿನಾದಕ್ಕೆ ಸಜ್ಜಾಗಿರುವುದನ್ನು ದೇವರು ನೋಡಬಯಸು ತ್ತಾನೆ. ಮಾನವದೇಹವನ್ನು ತಂತಿವಾದ್ಯವಾಗಿಸುವ ಈ ವಚನ ಬಸವಣ್ಣನವರ ಕಲ್ಪನಾ ಸಾಮರ್ಥ್ಯಕ್ಕೆ ಹಿಡಿದ ಕನ್ನಡಿಯಾಗಿದೆ. ಒಂದು ವಾದ್ಯದ ಎಲ್ಲ ಬಿಡಿಭಾಗಗಳ ಮಧ್ಯೆ ನಾದಮಾಧುರ್ಯಕ್ಕೆ ಕುಂದುಂಟಾಗದ ರೀತಿಯ ಬಿಗಿ ಇದ್ದಾಗ ಮಾತ್ರ ನಾದ ಹೊರಡುತ್ತದೆ. ಮಾನವರು ತಮ್ಮ ಜ್ಞಾನ ಮತ್ತು ಕ್ರಿಯೆಯ ಮಧ್ಯದ ಅವಿನಾಭಾವ ಸಂಬಂಧವನ್ನು ಉಳಿಸಿಕೊಂಡು ಕಾಯವನ್ನು ಪ್ರಸಾದಕಾಯವಾಗಿಸಿಕೊಂಡಾಗ ಆ ಕಾಯವು, ದೇವರು ಉರದಲೊತ್ತಿ ಬಾರಿಸುವಂಥ ಸಂಗೀತ ಸಾಧನವಾಗುತ್ತದೆ. ಆಗ ಅದನ್ನು ಪರಮಾತ್ಮನು ನುಡಿಸಿದಾಗ ಪ್ರಣವನಾದ ಹೊರಡುತ್ತದೆ. ಮಾನವ ಶರೀರದಲ್ಲಿ ನವಚಕ್ರಗಳಿದ್ದು ಅವುಗಳಿಗೆ ಸಂಬಂಧಿಸಿದಂತೆ ಒಂಬತ್ತು ಬಗೆಯ ಪ್ರಣವನಾದಗಳಿವೆ. ಶಿವಯೋಗದಲ್ಲಿ ನಿರತರಾದವರು ಈ ದಿವ್ಯನಾದವನ್ನು ಆಲಿಸುವರು ಎಂದು ಚೆನ್ನಬಸವಣ್ಣನವರು ತಿಳಿಸಿದ್ದಾರೆ.ಹೀಗೆ ನಮ್ಮ ಕಾಯವು ದಿವ್ಯಸಂಗೀತಸಾಧನವಾಗಿ ಸಿದ್ಧವಾದಾಗ ಪರಶಿವನು ಅದನ್ನು ನುಡಿಸುವನು ಆಗ ಪ್ರಣವನಾದಗಳು ಹೊರಹೊಮ್ಮುವವು ಎಂಬ ಅನುಭಾವದ ಭಾಷೆ ಈ ವಚನದಲ್ಲಿ ಅಡಗಿದೆ. ಆತ್ಮನಾದವಾದ ಈ ಪ್ರಣವನಾದವೇ ಭಕ್ತಿನಾದ. ಹೀಗೆ ಬಸವಣ್ಣನವರ ವಚನಗಳಲ್ಲಿ ಬದುಕು, ಕಾವ್ಯ ಮತ್ತು ತತ್ತ್ವಗಳು ಮುಪ್ಪುರಿಗೊಂಡಿವೆ. ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ–ಸಿಂಧನೂರು. 998094144

# ನೈಜ್ಯ ದೆಸೆ ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ನೇತಾಜಿ ಶಿಕ್ಷಣಸಂಸ್ಥೆಯಲ್ಲಿ ಶಿಕ್ಷಕರ ತುಲಾಭಾರ ವಿನೂತನ ಶಿಕ್ಷಕರ ದಿನಾಚರಣೆ

# ಗುರು ದೇವರಿಗಿಂತಲೂ ಮಿಗಿಲು...ಕೆ.ವಿಜಯ ಲಕ್ಷ್ಮಿ

**ನೈಜ್ಯ ದೆಸೆ ನ್ಯೂಸ್**




ಮಾನ್ವಿ:–ಅಕ್ಷರದ ಜೊತೆಗೆ ಬದುಕಿನ ದಾರಿ ತೋರುವ ಶಿಕ್ಷಕ ದೇವರಿಗಿಂತಲೂ ಮಿಗಿಲಾದವನು ಎಂದು ನೇತಾಜಿ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೆ.ವಿಜಯ ಲಕ್ಷ್ಮಿ ಹೇಳಿದರು. ಅವರು ಇಂದು ನೇತಾಜಿ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ. ಶಿಕ್ಷಕರ ದಿನಾಚರಣೆ ಮತ್ತು ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ ದಲ್ಲಿ ಮಾತನಾಡಿದರು. ಎಷ್ಟೇ ಕಾಲ ಬದಲಾದರೂ ಗುರುವಿಗೆ,ಶಿಕ್ಷಕರಿಗೆ ಇರುವ ಗೌರವ ಕಡಿಮೆ ಆಗಲಾರದು.ವಿದ್ಯಾರ್ಥಿಗಳ ಅಭ್ಯಾಸ ಮುಗಿದು ಜೀವನದ ಕೊನೆಯ ವರೆಗೂ ಆದರ್ಶ ಶಿಕ್ಷಕರು ಸದಾ ನೆನಪಿನಲ್ಲಿ ಇರುತ್ತಾರೆ.ಇಂತಹ 48 ಜನ ಶಿಕ್ಷಕರಿಗೆ ನಮ್ಮ ಸಂಸ್ಥೆಯ ಎಲ್ಲಾ ವಿದ್ಯಾರ್ಥಿ ಗಳು ಸೇರಿ ಗೌರವ ತುಲಾ ಭಾರ ಕಾರ್ಯಕ್ರಮ ಏರ್ಪಾಟು ಮಾಡಿದ್ದಾರೆ ಇದು ಮೆಚ್ಚಿಗೆಯ ವಿಷಯ.ಅಲ್ಲದೆ ಇದೊಂದು ವಿನೂತನ ಹೆಜ್ಜೆ. ಇದು ವರೆಗೆ ಕೇವಲ ಧರ್ಮ ಗುರುಗಳಿಗೆ ಮಾತ್ರ ಈ ರೀತಿಯ ತುಲಾಭಾರ ಸಮಾರಂಭ ನಡೆಯುತ್ತಿದ್ದವು. ಇದು ಒಂದು ಶಾಲೆಯ ಸಮಸ್ತ ಶಿಕ್ಷಕರಿಗೆ ಈ ರೀತಿ ಗೌರವ ತೋರುತ್ತಿರುವುದು ಇದೇ ಮೊದಲು ಎಂದುವಿಜಯ ಲಕ್ಷ್ಮಿ ಹೇಳಿದರು. ಡಾ.ಕೆ.ವಿನಯಾ,ಕೆ.ರಾಜಾ ರವಿವರ್ಮ ಮಾತನಾಡಿದರು.ಎಲ್ಲಾ ಶಿಕ್ಷಕರಿಗೆ, ಉಪನ್ಯಾಸಕರಿಗೆ ತುಲಾ ಭಾರ ನಡೆದ ನಂತರ ಶಿಕ್ಷಕರು ವಿದ್ಯಾರ್ಥಿ ಗಳು ಮಾತನಾಡಿದರು ಸುಪ್ರಿಯಾ ಮತ್ತು ಅರ್ಚನ ಶಿಕ್ಷಕ ರನ್ನು ಉತ್ತಮ ಶಿಕ್ಷಕರು ಎಂದು ಸನ್ಮಾನಿಸಲಾಯಿತು.ಎಲ್ಲಾ ಶಿಕ್ಷಕರಿಗೆ ಪ್ರಶಸ್ತಿ ಫಲಕ ನೀಡಲಾಯ್ತು. ಶ್ರೀ ಕೃಷ್ಣ, ಮತ್ತು ಸರ್ವಪಲ್ಲಿ ರಾಧಕೃಷ್ಣನ್ ಅವರ ಭಾವಚಿತ್ರ ಕ್ಕೆ ಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮ ಆರಂಭವಾಯಿತು. ಕೊನೆಯಲ್ಲಿ ರಾಧಾ ಕೃಷ್ಣ ವೇಷಧಾರಿ ಗಳು ಮತ್ತು ಇತರೆ ವಿದ್ಯಾರ್ಥಿ ಗಳಿಂದ ಆಕರ್ಷಕ ನೃತ್ಯ ನಡೆದವು.ಕಾರ್ಯಕ್ರಮ ದ ಅಧ್ಯಕ್ಷತೆಯನ್ನು ಕೆ.ಈ.ನರಸಿಂಹ ವಹಿಸಿದ್ದರು. ಕುಮಾರಿ ಶ್ರೇಯಾ,ಅಂಜನಾ ನಿರೂಪಿಸಿದರು. ಕಾವ್ಯ ವಂದಿಸಿದರು.ಸಿಂಧೂ,ರಜಿಯಾ ಪ್ರಾರ್ಥಿಸಿದರು. ಅನಿಸ್ ಫಾತಿಮಾ,ಬಸವರಾಜ ,ರಹಿಂ ಸೇರಿದಂತೆ ಎಲ್ಲಾ ಶಿಕ್ಷಕರು ಉಪನ್ಯಾಸಕರು, ವಿದ್ಯಾರ್ಥಿ ಗಳು ಇದ್ದರು.

## ಸಿಂಧನೂರು ಎಪಿಎಂಸಿಯಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ವಿಜಯೇಂದ್ರ ಅವರಲ್ಲಿ ವರ್ತಕರು ಮನವಿ

**ನೈಜ್ಯ ದೆಸೆ ನ್ಯೂಸ್**



**ಸಿಂಧನೂರು ನಗರದ ಎಪಿಎಂಸಿಯಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಹಾಗೂ ಕೈಗಾರಿಕಾ ಪ್ರದೇಶದ ಅಭಿವೃದ್ಧಿ ನಿರ್ಲಕ್ಷ್ಯ ಖಂಡಿಸಿ, ತಾಲೂಕು ಗಂಜ್ ವರ್ತಕರ ಕಲ್ಯಾಣ ಸಂಘದ ಪದಾಧಿಕಾರಿಗಳು ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ ಅವರಿಗೆ ದೂರು ಸಲ್ಲಿಸಿ ಮನವಿ ಮಾಡಿದರು.**

ಶುಕ್ರವಾರ ಹಂಚಿನಾಳ ಕ್ಯಾಂಪ್ ಬಳಿ ವಿಜಯೇಂದ್ರ ಅವರನ್ನು ಭೇಟಿಯಾದ ಸಂಘದ ನಿಯೋಗವು, ತಾಲೂಕಿನಲ್ಲಿ ಕಳೆದ 30 ವರ್ಷಗಳಿಂದ ಯಾವುದೇ ಹೊಸ ವಾಣಿಜ್ಯ ಕೈಗಾರಿಕಾ ಪ್ರದೇಶವನ್ನು ಸ್ಥಾಪಿಸಿಲ್ಲ ಎಂದು ಗಮನಕ್ಕೆ ತಂದು, ಸುಮಾರು 20 ವರ್ಷಗಳಿಂದ ಎಪಿಎಂಸಿ ಯಾರ್ಡ್‌ನಲ್ಲಿ ಹೊಸ ನಿವೇಶನಗಳನ್ನು ಅಭಿವೃದ್ಧಿ ಪಡಿಸದೆ ಇರುವುದರಿಂದ ಸಣ್ಣ ವರ್ತಕರು ಉದ್ಯಮ ನಡೆಸಲು ತೀವ್ರ ಸಂಕಷ್ಟದಲ್ಲಿದ್ದಾರೆ. ಹಿಂದೆ ವಿತರಿಸಲಾದ ನಿವೇಶನಗಳ ಲೀಸ್ ಕಮ್ ಸೇಲ್' ಅವಧಿ ಮುಗಿದಿದ್ದರೂ ಇದುವರೆಗೂ ಹಂಚಿಕೆದಾರರ ಹೆಸರಿಗೆ ನೋಂದಣಿ ಮಾಡಿಲ್ಲ. ಸಿಂಧನೂರು ಭಾಗದಿಂದ ನೆರೆ ರಾಜ್ಯಗಳಿಗೆ ಅತಿ ಹೆಚ್ಚು ಭತ್ತ ರವಾನೆಯಾಗುತ್ತದೆ. ಆದರೆ, ಭತ್ತ ಖರೀದಿಸಿದ ಹೊರರಾಜ್ಯದ ಖರೀದಿದಾರರು ಹಲವು ಬಾರಿ ಹಣ ಪಾವತಿಸದೆ ವಂಚನೆ ಎಸಗುತ್ತಿದ್ದು, ವರ್ತಕರಿಗೆ ಆರ್ಥಿಕ ಭದ್ರತೆ ಇಲ್ಲದಂತಾಗಿದೆ. ಭತ್ತ ಹಾಗೂ ಅಕ್ಕಿಯನ್ನು ಸುಲಭವಾಗಿ ಸರಬರಾಜು, ಮಾಡಲು ರೈಲ್ವೆ ಗೂಡ್ ಶೆಡ್ ಸೌಲಭ್ಯ ಒದಗಿಸಬೇಕು. ಎಪಿ–ಎಂಸಿಯಲ್ಲಿ ಕುಡಿವ ನೀರು, ಶೌಚಗೃಹ ಸೇ–ರಿದಂತೆ ಸೌಕರ್ಯಗಳ ಅಭಿವೃದ್ಧಿಗೆ ಸರ್ಕಾರದ ಮೇಲೆ ಒತ್ತಡ ಹೇರಬೇಕೆಂದು ಸಂಘದ ಪದಾಧಿಕಾರಿಗಳು ಮನವಿ ಮಾಡಿಕೊಂಡರು.

ಈ ವೇಳೆ: ಸಂಘದ ಅಧ್ಯಕ್ಷ ದೊಡ್ಡನಗೌಡ ಕಲ್ಲೂರು, ಪ್ರಧಾನ ಕಾರ್ಯದರ್ಶಿ ಫಕೀರಪ್ಪ ಬಾಗೋಡಿ ಸೇ–ರಿದಂತೆ ಪ್ರಮುಖರು ಉಪಸ್ಥಿತರಿದ್ದರು.

## ಜಿಲ್ಲಾಡಳಿತದ ನಿರ್ಲಕ್ಷ್ಯಕ್ಕೆ ಮತ್ತೊಂದು ನಿದರ್ಶನವೇ ಸಂಕನೂರು ಮಾದರಿ ಶಾಲೆ

### ಕಳಪೆ ಕಾಮಗಾರಿ ಕುರಿತು ವರದಿಯಾದರೂ ಕ್ರಮವಿಲ್ಲ; ಮಕ್ಕಳ ಸುರಕ್ಷತೆ ಬಗ್ಗೆ ಪಾಲಕರಲ್ಲಿ ಆತಂಕ

**ನೈಜ್ಯ ದೆಸೆ ನ್ಯೂಸ್**

**ರಾಯಚೂರು: ಜಿಲ್ಲೆಯಲ್ಲಿ ಸರ್ಕಾರಿ ಕಟ್ಟಡಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟದ ಕುರಿತು ಹಲವು ದೂರುಗಳು ಕೇಳಿಬರುತ್ತಿದ್ದರೂ, ಸಂಬಂಧಪಟ್ಟ ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಮಸ್ಯೆಗಳು ಮುಂದುವ–ರಿಯುತ್ತಿವೆ ಎಂಬ ಆರೋಪಗಳು ಕೇಳಿಬರುತ್ತಿವೆ.**

ಸಂಕನೂರು ಗ್ರಾಮದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಆಂಗ್ಲ ಮಾಧ್ಯಮ ನವೋದಯ ಮಾದರಿ ಶಾಲೆಯ ನೂತನ ಕಟ್ಟಡದ ಕಳಪೆ ಹಾಗೂ ಅಪೂರ್ಣ ಕಾಮಗಾ–ರಿಗಳ ಕುರಿತು 'ನೈಜ ದೆಸೆ' ಪತ್ರಿಕೆಯಲ್ಲಿ ವರದಿ ಪ್ರಕಟವಾಗಿ, ಸಮಸ್ಯೆಗಳನ್ನು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೂ ತರಲಾಗಿತ್ತು. ಆದರೆ ವರದಿ ಪ್ರಕಟವಾದ ಬಳಿಕವೂ ಈವರೆಗೆ ಪರಿಣಾಮಕಾರಿ ಕ್ರಮ ಕೈಗೊಳ್ಳದಿರುವುದು ಗ್ರಾಮಸ್ಥರು ಹಾಗೂ ಪಾಲಕರ ಅಸಮಾಧಾನಕ್ಕೆ ಕಾರಣವಾಗಿದೆ.

ಮಳೆ ಬಂದಾಗ ಶಾಲಾ ಆವರಣದಲ್ಲಿ ನೀರು ನಿಲ್ಲುವುದು, ಕಟ್ಟಡದಲ್ಲಿ ತೇವಾಂಶ ಕಾಣಿಸಿಕೊಳ್ಳುವುದು, ಗೋಡೆಗಳ ಬಣ್ಣ ಕಿತ್ತುಬರುವುದು ಸೇರಿದಂತೆ ವಿವಿಧ ಸಮಸ್ಯೆಗಳು ಕಂಡುಬರುತ್ತಿವೆ. ಕಟ್ಟಡದ ಉದ್ಘಾಟನೆಗೂ ಮುನ್ನವೇ ಇಂತಹ ಸಮಸ್ಯೆಗಳು ಕಾಣಿಸಿಕೊಂಡಿರುವುದು ಕಾಮಗಾ–ರಿಯ ಗುಣಮಟ್ಟದ ಬಗ್ಗೆ ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಈ ಕುರಿತು ಈಗಾಗಲೇ ಹಲವು ಬಾರಿ ಸಮಸ್ಯೆಗಳನ್ನು ಬಗೆಹ–ರಿಸುವಂತೆ ತಿಳಿಸಿದ್ದರೂ, ಅಲ್ಪಸಂಖ್ಯಾತರ ಇಲಾಖೆಯ ಅಧಿಕಾ–ರಿಗಳು ಸಮಸ್ಯೆಯ ಗಂಭೀರತೆಯನ್ನು ಪರಿಗಣಿಸದೆ ನಿರ್ಲಕ್ಷ್ಯ ವಹಿಸುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ.



ಈ ಹಿನ್ನೆಲೆಯಲ್ಲಿ ಶಾಲಾ ಕಟ್ಟಡದ ಕಾಮಗಾರಿಯ ಸಂಪೂರ್ಣ ಗುಣಮಟ್ಟವನ್ನು ತಾಂತ್ರಿಕವಾಗಿ ಪರಿಶೀಲಿಸಬೇಕು. ಕಾಮಗಾ–ರಿಯಲ್ಲಿ ಲೋಪಗಳು ಕಂಡುಬಂದರೆ ಗುತ್ತಿಗೆದಾರರು ಹಾಗೂ ಮೇಲ್ವಿಚಾರಣೆಯ ಜವಾಬ್ದಾರಿ ಹೊಂದಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಹಾಗೂ ಪಾಲಕರು ಒತ್ತಾಯಿಸಿದ್ದಾರೆ.

ಇದೇ ವೇಳೆ, ಇತ್ತೀಚೆಗೆ 'ನೈಜ ದೆಸೆ' ಪತ್ರಿಕೆಯಲ್ಲಿ ವರದಿ ಪ್ರಕಟವಾದ ಬಳಿಕವೂ ಅಧಿಕಾರಿಗಳಿಂದ ಅಗತ್ಯ ಮುನ್ನೆಚ್ಚರಿಕೆ ಹಾಗೂ ಕ್ರಮ ಕೈಗೊಳ್ಳದಿರುವುದರಿಂದ ಮಾನವಿ ಪಟ್ಟಣದ ವಸತಿ ನಿಲಯದಲ್ಲಿ ಕಳಪೆ ಆಹಾರ ಸೇವನೆಯಿಂದ ನೂರಾರು ಮಕ್ಕಳು ಅಸ್ವಸ್ಥರಾಗಿರುವ ಘಟನೆ ಕುರಿತು ಸಾರ್ವಜನಿಕ ವಲಯದಲ್ಲಿ ಆತಂಕ ವ್ಯಕ್ತವಾಗಿದೆ. ಇಂತಹ ಘಟನೆಗಳು ಮರುಕಳಿಸದಂತೆ ಜಿಲ್ಲಾಡಳಿತ ಕಟ್ಟುನಿಟ್ಟಿನ ಮೇಲ್ವಿಚಾರಣೆ ನಡೆಸಬೇಕು ಎಂಬ ಆಗ್ರಹ ಕೇಳಿಬರುತ್ತಿದೆ. "ಮಕ್ಕಳಿಗೆ ಸಂಬಂಧಿಸಿದ ವಿಷಯಗಳಲ್ಲಿ ಅಧಿಕಾರಿಗಳು ಯಾವುದೇ ರೀತಿಯ ನಿರ್ಲಕ್ಷ್ಯ ತೋರಬಾರದು. ವರದಿಗಳು ಹಾಗೂ ಸಾರ್ವಜನಿಕರ ದೂರುಗಳ ನಂತರವೂ ಸಮಸ್ಯೆ ಬಗೆಹರಿಯದಿದ್ದರೆ, ಮಕ್ಕಳ ಸುರಕ್ಷತೆಗೆ ಧಕ್ಕೆಯಾದ ಸಂದರ್ಭದಲ್ಲಿ ಹೊಣೆ ಯಾರು?" ಎಂದು ಸಾರ್ವಜನಿಕರು ಪ್ರಶ್ನಿಸಿದ್ದಾರೆ.

"ಸಂಕನೂರು ಮಾದರಿ ಶಾಲೆಯ ಕಾಮಗಾರಿಯ ಗುಣಮಟ್ಟದ ಕುರಿತು ತಕ್ಷಣ ತಾಂತ್ರಿಕ ಪರಿಶೀಲನೆ ನಡೆಸಬೇಕು. ಅಲ್ಪಸಂಖ್ಯಾತರ ಇಲಾಖೆಯ ಅಧಿಕಾ–ರಿಗಳ ನಿರ್ಲಕ್ಷ್ಯ ಕಂಡುಬಂದರೆ ಅವರ ವಿರುದ್ಧ ಶಿಸ್ತು ಕ್ರಮ ಕೈಗೊಂಡು, ಜವಾಬ್ದಾ–ರಿಯುತವಾಗಿ ಕರ್ತವ್ಯ ನಿರ್ವಹಿಸುವಂತೆ ಜಿಲ್ಲಾಡಳಿತ ಸೂಚಿಸಬೇಕು. ಮಕ್ಕಳ ಜೀವಕ್ಕೆ ಅಪಾಯ ಉಂಟಾದ ನಂತರ ಕ್ರಮ ಕೈಗೊಳ್ಳುವ ಬದಲು ಮುನ್ನೆಚ್ಚರಿಕೆಯಾಗಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು" ಎಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತರ ವಿಭಾಗದ ಕಾರ್ಯದರ್ಶಿ ಮುಜಾಹಿದ್ ಮರ್ಚೆಡ್ ಆಗ್ರಹಿಸಿದ್ದಾರೆ.

ಕಾಮಗಾರಿಯಲ್ಲಿ ಯಾವುದೇ ಭ್ರಷ್ಟಾಚಾರ ಅಥವಾ ನಿಯಮ ಉಲ್ಲಂಘನೆ ನಡೆದಿದೆಯೇ ಎಂಬುದನ್ನೂ ಸಮಗ್ರ ತನಿಖೆಯ ಮೂಲಕ ಪರಿಶೀಲಿಸಬೇಕು. ಮಕ್ಕಳ ಸುರಕ್ಷತೆ ಹಾಗೂ ಸಾರ್ವಜನಿಕ ಹಣದ ಸದ್ಬಳಕೆಯ ದೃಷ್ಟಿಯಿಂದ ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಳ್ಳಬೇಕಿದೆ.




## ಫೆಡರಲ್ ಶಿಕ್ಷಣ ಸಂಸ್ಥೆಯಲ್ಲಿ ಸಂಭ್ರಮದ ಶ್ರೀಕೃಷ್ಣ ಜನ್ಮಾಷ್ಟಮಿ ಹಾಗೂ ಶಿಕ್ಷಕರ ದಿನಾಚರಣೆ

### ರಾಧಾ–ಕೃಷ್ಣರ ವೇಷದಲ್ಲಿ ಕಂಗೊಳಿಸಿದ ಮಕ್ಕಳು; ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಮೆಚ್ಚುಗೆ

**ನೈಜ್ಯ ದೆಸೆ ನ್ಯೂಸ್**



**ರಾಯಚೂರು: ಯರಮರಸ್ ಕ್ಯಾಂಪ್‌ನಲ್ಲಿರುವ ಫೆಡರಲ್ ಶಿಕ್ಷಣ ಸಂಸ್ಥೆಯ ಸಮೂಹಗಳ ವತಿಯಿಂದ ಫೆಡರಲ್ ಪಬ್ಲಿಕ್ ಅಃಖಇ ಶಾಲೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಹಾಗೂ ಭಾರತದ ಮಾಜಿ ರಾಷ್ಟ್ರಪತಿ, ಮಹಾನ್ ತತ್ವಜ್ಞಾನಿ ಮತ್ತು ಶಿಕ್ಷಣ ತಜ್ಞ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 138ನೇ ಜನ್ಮದಿನಾಚರಣೆಯನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು.**

ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ಶಾಲಾ ಆವರಣವು ಹಬ್ಬದ ವಾತಾವರಣದಿಂದ ಕಂಗೊಳಿಸಿತು. ಪುಟಾಣಿ ವಿದ್ಯಾರ್ಥಿಗಳು ಶ್ರೀಕೃಷ್ಣ ಹಾಗೂ ರಾಧೆಯ ಆಕರ್ಷಕ ವೇಷಭೂಷಣಗಳನ್ನು ಧರಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಬಣ್ಣಬಣ್ಣದ ಉಡುಪು, ಕಿರೀಟ, ಕೊಳಲು ಸೇರಿದಂತೆ ಶ್ರೀಕೃಷ್ಣನ ವಿವಿಧ ಅಲಂಕಾರಗಳಲ್ಲಿ ಕಾಣಿಸಿಕೊಂಡ ಮಕ್ಕಳು ಎಲ್ಲರ ಗಮನ ಸೆಳೆದರು. ವಿದ್ಯಾರ್ಥಿಗಳು ಕೃಷ್ಣನ ಬಾಲಲೀಲೆ ಹಾಗೂ ಭಾರತೀಯ ಸಂಸ್ಕೃತಿಯ ವೈವಿಧ್ಯತೆಯನ್ನು ಪ್ರತಿಬಿಂಬಿಸುವ ನೃತ್ಯ, ಸಂಗೀತ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಿದರು. ಮಕ್ಕಳ ಮುಗ್ಧ ಅಭಿನಯ, ನೃತ್ಯ ಹಾಗೂ ಆತ್ಮವಿಶ್ವಾಸಭರಿತ ಪ್ರದರ್ಶನವು ಪೋಷಕರು, ಶಿಕ್ಷಕರು ಹಾಗೂ ಅತಿಥಿಗಳ ಮೆಚ್ಚುಗೆಗೆ ಪಾತ್ರವಾಯಿತು.

ಗುರುವಿನ ಮಹತ್ವ ಸಾರಿದ ಶಿಕ್ಷಕರ ದಿನಾಚರಣೆ ನಂತರ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜೀವನ, ಆದರ್ಶಗಳು ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಅಪಾರ ಕೊಡುಗೆಯನ್ನು ಸ್ಮರಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಮೊಹಮ್ಮದ್ ಅಬ್ದುಲ್ ಹೈ ಫಿರೋಜ್ ಮಾತನಾಡಿ, "ಶಿಕ್ಷಕರು ಕೇವಲ ಪಠ್ಯವನ್ನು ಬೋಧಿಸುವವರಲ್ಲ; ಅವರು ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ರೂಪಿಸುವ ಶಿಲ್ಪಿಗಳು. ಉತ್ತಮ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮಕ್ಕಳಿಗೆ ಜ್ಞಾನ ನೀಡುವುದರ ಜೊತೆಗೆ ಪ್ರಾಮಾಣಿಕತೆ, ಶಿಸ್ತು, ಮಾನವೀಯತೆ, ಸಹಾನುಭೂತಿ ಮತ್ತು ದೇಶಪ್ರೇಮದಂತಹ ಮೌಲ್ಯಗಳನ್ನು ಬೆಳೆಸಬೇಕು" ಎಂದು ಹೇಳಿದರು.

"ಇಂದಿನ ಮಕ್ಕಳು ನಾಳಿನ ಸಮಾಜದ ನಾಯಕರಾಗಲಿದ್ದಾರೆ. ಅವರ ಭವಿಷ್ಯವನ್ನು ರೂಪಿಸುವಲ್ಲಿ ಶಿಕ್ಷಕರು ಹಾಗೂ ಶಿಕ್ಷಣ ಸಂಸ್ಥೆಗಳ ಜವಾಬ್ದಾರಿ ದೊಡ್ಡದಾಗಿದೆ. ಆದ್ದರಿಂದ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ಮತ್ತು ಮೌಲ್ಯಗಳನ್ನು ಬೆಳೆಸುವತ್ತ ಹೆಚ್ಚಿನ ಗಮನ ನೀಡಬೇಕು" ಎಂದು ಅವರು ಕರೆ ನೀಡಿದರು. ಕಾರ್ಯನಿರ್ವಾಹಕ ನಿರ್ದೇಶಕಿ ಕುಮಾರಿ ಶ್ರೀಲೇಖಾ ಮಾತನಾಡಿ, ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ಅತ್ಯುನ್ನತ ಸ್ಥಾನವಿದೆ. ವಿದ್ಯಾರ್ಥಿಗಳ ಜೀವನದಲ್ಲಿ ಶಿಕ್ಷಕರು ನೀಡುವ ಮಾರ್ಗದರ್ಶನ ಎಂದಿಗೂ ಮರೆಯಲಾಗದು. ಶಿಕ್ಷಕರಿಗೆ ಗೌರವ ನೀಡುವ ಪರಂಪರೆಯನ್ನು ಮುಂದುವರಿಸುವುದರ ಜೊತೆಗೆ, ವಿದ್ಯಾರ್ಥಿಗಳು ತಮ್ಮ ಗುರುಗಳ ಮಾರ್ಗದರ್ಶನವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳ ಪ್ರತಿಭೆಗೆ ವೇದಿಕೆ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ಉತ್ತಮ ವೇದಿಕೆ ಕಲ್ಪಿಸಲಾಯಿತು. ರಾಧಾ?ಕೃಷ್ಣರ ವೇಷಭೂಷಣ, ನೃತ್ಯ ಹಾಗೂ ಸಾಂಸ್ಕೃತಿ–ಕ ಪ್ರದರ್ಶನಗಳ ಮೂಲಕ ಮಕ್ಕಳು ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯ ಮಹತ್ವವನ್ನು ಪರಿಚಯಿಸಿಕೊಂಡರು. ಕಾರ್ಯಕ್ರಮದಲ್ಲಿ ಫೆಡರಲ್ ಪಬ್ಲಿಕ್ ಅಃಖಇ ಶಾಲೆಯ ಪ್ರಾಂಶುಪಾಲರಾದ ಎಂ.ಡಿ. ನೌಶದ್, ಕಚೇರಿಯ ಮುಖ್ಯ ಅಧೀಕ್ಷಕರಾದ ಶ್ರೀ ಗಧಾರ ವೆಂಕಟೇಶ್, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಶ್ರೀಕೃಷ್ಣ ಜನ್ಮಾಷ್ಟಮಿಯ ಭಕ್ತಿಭಾವ ಹಾಗೂ ಶಿಕ್ಷಕರ ದಿನಾಚರಣೆಯ ಗೌರವಪೂರ್ಣ ವಾತಾವರಣ ಎರಡೂ ಒಂದೇ ವೇದಿಕೆಯಲ್ಲಿ ಮೇಳೈಸಿದ್ದು, ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು. ವಿದ್ಯಾರ್ಥಿಗಳ ಉತ್ಸಾಹಭರಿತ ಭಾಗವಹಿಸುವಿಕೆಯಿಂದ ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಿತು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101